ಸಂಪುಟ : 11 ಸಂಚಿಕೆ: 35 ಪುಟ : 4+2 ಬೆಲೆ: 3.00 ಶುಕ್ರವಾರ ಮಾರ್ಚ್ 06 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 35 Pages : 4+2 Price : 3.00 Friday March 06 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಾಹನ ಮಾಲಿಕರಿಗೆ ವಿಚಾರಣೆಗೆ ಹಾಜರಾಗಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಅರಣ್ಯ ವಿಭಾಗದ ಮುಂಡರಗಿ ವಲಯದಲ್ಲಿ ದಾಖಲಾದ ವನ್ಯಜೀವಿ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖೆಯಿಂದ ಅಮಾನತ್ತುಪಡಿಸಿಕೊಂಡಿರುವ ಎರಡು ವಾಹನಗಳಾದ ಪಲ್ಸರ್ 150 ಸಿಸಿ ಬೈಕ್ ಹಾಗೂ ಪ್ಲಾಟಿನಾ 100 ಸಿಸಿ ಬೈಕ್ ಕುರಿತು ಕರ್ನಾಟಕ ವನ್ಯಜೀವಿ ಕಾಯ್ದೆ ಪ್ರಕಾರ ತನಿಖೆ ನಡೆಸಲಾಗುತ್ತಿದೆ.

ಈ ಸಂಬಂಧ ವಾಹನಗಳನ್ನು ಏಕೆ ಮುಟ್ಟುಗೋಲು ಹಾಕಿಕೊಳ್ಳಬಾರದು ಎಂಬ ಕುರಿತು ಲಿಖಿತ ಸಮಜಾಯಿಷಿ ಸಲ್ಲಿಸುವಂತೆ ಮುಂಡರಗಿ ವಲಯ ಅರಣ್ಯಾಧಿಕಾರಿಗಳು ವಾಹನ ಮಾಲಿಕರಿಗೆ ನೋಟಿಸ್ ಜಾರಿ ಮಾಡಿದ್ದಾರೆ. ಆದರೆ ನೋಟಿಸ್ ನೀಡಲು ಹೋದ ಸಂದರ್ಭದಲ್ಲಿ ವಾಹನವನ್ನು ಈಗಾಗಲೇ ಮಾರಾಟ ಮಾಡಿರುವುದಾಗಿ ಸಿಬ್ಬಂದಿಗೆ ಮೌಖಿಕವಾಗಿ ತಿಳಿಸಿದ್ದು, ಇದುವರೆಗೆ ಯಾರೂ ವಿಚಾರಣೆಗೆ ಹಾಜರಾಗಿಲ್ಲ ಎಂದು ತಿಳಿಸಲಾಗಿದೆ.

ಈ ಪ್ರಕರಣದ ಅಂತಿಮ ವಿಚಾರಣೆಯನ್ನು ಮಾರ್ಚ್ 12 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಗದಗ ವಿಭಾಗದ ಬಿಂಕದಕಟ್ಟಿ ಕಚೇರಿಯಲ್ಲಿರುವ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿಯಲ್ಲಿ ನಿಗದಿಪಡಿಸಲಾಗಿದೆ.

ಆದ್ದರಿಂದ ವಾಹನ ಮಾಲಿಕರು ಅಥವಾ ಸಂಬಂಧಪಟ್ಟವರು ನಿಗದಿತ ದಿನಾಂಕ ಮತ್ತು ಸಮಯಕ್ಕೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ. ಒಂದು ವೇಳೆ ಹಾಜರಾಗದಿದ್ದರೆ, ಅವರಿಗೆ ವಿಚಾರಣೆಯಲ್ಲಿ ಆಸಕ್ತಿ ಇಲ್ಲವೆಂದು ಏಕಪಕ್ಷೀಯವಾಗಿ ತೀರ್ಮಾನಿಸಿ ವಾಹನಗಳನ್ನು ಅಂತಿಮವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ಗದಗ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಎಸ್.ಆರ್. ಪಾಟೀಲ ಸೂಚನೆ

## ಮಾ.8ರಂದು ತಾಲೂಕು ಮಟ್ಟದಲ್ಲಿ ಗ್ಯಾರಂಟಿ ಫಲಾನುಭವಿಗಳ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಮಹಿಳಾ ಫಲಾನುಭವಿಗಳನ್ನು ಒಟ್ಟುಗೂಡಿಸಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಮಹಿಳಾ ಸಮಾವೇಶಗಳನ್ನು ಆಯೋಜಿಸಲಾಗುವುದು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತ್ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮಿ, ಯುವನಿಧಿ ಹಾಗೂ ಗೃಹ ಜ್ಯೋತಿ ಯೋಜನೆಗಳು ಧಾರವಾಡ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿವೆ. ವಿಶೇಷವಾಗಿ ಮಹಿಳೆಯರು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಈ ಯೋಜನೆಗಳಿಂದ ಹೆಚ್ಚಿನ ಅನುಕೂಲವಾಗುತ್ತಿದೆ. ಯೋಜನೆಗಳ ದುರಪಯೋಗವಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಿ ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಲಾಭ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಯುವನಿಧಿ ಯೋಜನೆ ಕುರಿತು ಗ್ರಾಮಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿ ನಿರುದ್ಯೋಗಿ ಯುವಕರಿಗೆ ಯೋಜನೆಯ ಪ್ರಯೋಜನಗಳು, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಅರ್ಹತೆಗಳ ಬಗ್ಗೆ ಮಾಹಿತಿ ನೀಡಬೇಕು. ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಮರಣ ಹೊಂದಿದ್ದರೆ ಅವರ ಖಾತೆಗೆ ಜಮೆಯಾದ ಹಣವನ್ನು ಸರ್ಕಾರದ ನಿಯಮಾನುಸಾರ ವಾಪಸ್ ಪಡೆಯಬೇಕು ಎಂದು ಸೂಚಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಗೆ ಹೊಸದಾಗಿ 70 ಬಸ್‌ಗಳು ಬಂದಿರುವುದರಿಂದ ಶಾಲಾ ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಗತ್ಯ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> "ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಇಲಾಖಾ ಅಧಿಕಾರಿಗಳ ಜವಾಬ್ದಾರಿ ಹೆಚ್ಚಿದೆ. ಎಲ್ಲ ಹಂತದಲ್ಲೂ ಯೋಜನೆಗಳು ಪಾರದರ್ಶಕವಾಗಿ ಜಾರಿಯಾಗಬೇಕು. ದುರ್ಬಳಕೆ ಕಂಡುಬಂದರೆ ಅನುದಾನವನ್ನು ತಕ್ಷಣ ನಿಲ್ಲಿಸಿ ಈಗಾಗಲೇ ನೀಡಿರುವ ಹಣವನ್ನು ವಾಪಸ್ ಪಡೆಯುವ ಕ್ರಮ ಕೈಗೊಳ್ಳಬೇಕು"
>
> **-ಭುವನೇಶ ಪಾಟೀಲ,** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ

### ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಪ್ರಗತಿ

ಧಾರವಾಡ ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ವ್ಯಾಪಕವಾಗಿ ಜಾರಿಯಾಗಿವೆ. ಯುವನಿಧಿ ಯೋಜನೆಯಡಿ 11,501 ಅರ್ಜಿಗಳು ಸ್ವೀಕೃತವಾಗಿದ್ದು, 8,577 ಫಲಾನುಭವಿಗಳಿಗೆ ಡಿಬಿಟಿ ಮೂಲಕ ಸುಮಾರು 26.19 ಕೋಟಿ ಸಹಾಯಧನ ಜಮೆಯಾಗಿದೆ. ಶಕ್ತಿ ಯೋಜನೆಯಡಿ ಇದುವರೆಗೆ 58 ಕೋಟಿಗೂ ಹೆಚ್ಚು ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ಸರ್ಕಾರದಿಂದ 1,47,329.07 ಲಕ್ಷ ಬಿಡುಗಡೆಗೊಂಡಿದೆ. ಗೃಹ ಜ್ಯೋತಿ ಯೋಜನೆಯಡಿ 5,17,414 ಫಲಾನುಭವಿಗಳಿಗೆ 68,317.99 ಲಕ್ಷ ಅನುದಾನ ನೀಡಲಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ 4,01,810 ಮಹಿಳೆಯರಿಗೆ ಒಟ್ಟು 1889.18 ಕೋಟಿ ಹಣ ಜಮೆಯಾಗಿದೆ. ಅನ್ನಭಾಗ್ಯ ಯೋಜನೆಯಡಿ 3,62,516 ಫಲಾನುಭವಿಗಳಿಗೆ ಸುಮಾರು 358.29 ಲಕ್ಷ ವೆಚ್ಚ ಮಾಡಲಾಗಿದೆ.

### ಜಮೀನು ದಾಖಲೆ ಪರಿಶೀಲಿಸಲು ರೈತರಲ್ಲಿ ಕಾವ್ಯಾ ಸೋಮನಕಟ್ಟಿ ಮನವಿ

## ವಿಂಡ್ ಕಂಪನಿಗಳ ಹಾವಳಿ ಹೆಚ್ಚಳ!



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿನ ವಿಂಡ್ ಕಂಪನಿಗಳ ಹಾವಳಿ ದಿನೇ ದಿನೇ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರು ತಮ್ಮ ಜಮೀನುಗಳ ದಾಖಲಾತಿಗಳನ್ನು ಆಗಾಗ ಪರಿಶೀಲಿಸಿ ಎಚ್ಚರಿಕೆಯಿಂದ ಇರಬೇಕು ಎಂದು ರೈತ ಸಂಘದ ಮಹಿಳಾ ಮುಖಂಡೆ ಕಾವ್ಯಾ ಸೋಮನಕಟ್ಟಿ ಎಚ್ಚರಿಕೆ ನೀಡಿದರು.

ಪಟ್ಟಣದ ಪಿಡಬ್ಲ್ಯುಡಿಯ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಹಲವು ಗ್ರಾಮಗಳಲ್ಲಿ ವಿಂಡ್ ಕಂಪನಿಗಳು ಏಜೆಂಟರ ಮೂಲಕ ರೈತರ ಜಮೀನುಗಳನ್ನು ಲೀಜ್‌ಗೆ ಪಡೆದು ಕೆಲಸಗಳನ್ನು ನಡೆಸುತ್ತಿವೆ. ಆದರೆ ಕೆಲವೆಡೆ ರೈತರ ಅರಿವಿಗೆ ಬಾರದಂತೆ ಹಕ್ಕು ನೋಂದಣಿ ಮಾಡಿಕೊಳ್ಳುತ್ತಿರುವ ಬಗ್ಗೆ ಆರೋಪಗಳು ಕೇಳಿ ಬರುತ್ತಿವೆ ಎಂದು ಹೇಳಿದರು.

ಹೀಗಾಗಿ ರೈತರು ತಮ್ಮ ಜಮೀನುಗಳ ದಾಖಲೆಗಳನ್ನು ನಿಯಮಿತವಾಗಿ ಪರಿಶೀಲಿಸಬೇಕು. ಈ ವಿಷಯದ ಕುರಿತು ಶೀಘ್ರದಲ್ಲೇ ರೈತ ಸಂಘದ ವತಿಯಿಂದ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ವೇಳೆ ರೈತ ಮುಖಂಡ ಶಿವಲಿಂಗಪ್ಪ ಬೊಪಳಾಪೂರ ಮಾತನಾಡಿ, ಕೇಂದ್ರ ಸರ್ಕಾರ ಅಮೆರಿಕದೊಂದಿಗೆ ಮಾಡಿಕೊಂಡಿರುವ ರೈತ ಒಪ್ಪಂದ ನೀತಿಯನ್ನು ತೀವ್ರವಾಗಿ ಖಂಡಿಸಿದರು. ಈ ಒಪ್ಪಂದದಿಂದ ರೈತರ ಹಕ್ಕುಗಳಿಗೆ ಧಕ್ಕೆಯಾಗುವ ಸಾಧ್ಯತೆ ಇದ್ದು, ವಿದೇಶಿಗಳು ಸೂಚಿಸುವ ಬೆಳೆಗಳನ್ನು ಬೆಳೆಸಬೇಕಾದ ಪರಿಸ್ಥಿತಿ ರೈತರಿಗೆ ಎದುರಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರ ಈ ಹಿಂದೆ ಜಾರಿಗೆ ತಂದಿದ್ದ ಮೂರು ಕೃಷಿ ಕಾಯ್ದೆಗಳಿಗೆ ವಿರೋಧವಾಗಿ ದೆಹಲಿಯಲ್ಲಿ ಸಾವಿರಾರು ರೈತರು ಹೋರಾಟ ನಡೆಸಿದ್ದು, 750ಕ್ಕೂ ಹೆಚ್ಚು ರೈತರು ಹುತಾತ್ಮರಾಗಿದ್ದರು ಎಂಬುದನ್ನು ಸರ್ಕಾರ

▶▶3ನೇ ಪುಟಕ್ಕೆ

> "ರೈತರು ತಮ್ಮ ಜಮೀನುಗಳ ದಾಖಲೆಗಳನ್ನು ನಿಯಮಿತವಾಗಿ ಪರಿಶೀಲಿಸಬೇಕು. ಇಂದು ಮಾಡುವ ತಪ್ಪಿನಿಂದ ಭವಿಷ್ಯದಲ್ಲಿ ಮಕ್ಕಳಿಗೆ ತೊಂದರೆ ಉಂಟಾಗಬಾರದು. ವಿಂಡ್ ಕಂಪನಿಗಳ ವ್ಯವಹಾರಗಳಲ್ಲಿ ರೈತರು ಹೆಚ್ಚು ಎಚ್ಚರಿಕೆಯಿಂದ ಇರಬೇಕು."
>
> **– ಕಾವ್ಯಾ ಸೋಮನಕಟ್ಟಿ,** ರೈತ ಸಂಘದ ಮಹಿಳಾ ಮುಖಂಡೆ

> "ಸರ್ಕಾರಗಳು ರೈತರಿಗೆ ಹಾನಿ ಮಾಡುವ ಯೋಜನೆಗಳ ಬದಲು ಉಪಯುಕ್ತ ಯೋಜನೆಗಳನ್ನು ಜಾರಿಗೆ ತಂದು ಅವರನ್ನು ಆರ್ಥಿಕವಾಗಿ ಬಲಪಡಿಸಬೇಕು. ಈ ಬಾರಿಯ ಬಜೆಟ್‌ನಲ್ಲಿ ಉತ್ತರ ಕರ್ನಾಟಕಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು,"
>
> **-ಮೇಘರಾಜ ಭಾವಿ,** ರೈತ ಸಂಘದ ಮುಖಂಡ

### ರೈತರ ಪ್ರಮುಖ ಆಗ್ರಹಗಳು

*ಉತ್ತರ ಕರ್ನಾಟಕಕ್ಕೆ ಬಜೆಟ್‌ನಲ್ಲಿ ಹೆಚ್ಚಿನ ಆದ್ಯತೆ ನೀಡಬೇಕು.
*ಕಳಸಾ-ಬಂಡೂರಿ ಯೋಜನೆ ಜಾರಿಗೆ ತರಬೇಕು
*ಕೃಷ್ಣಾ ನದಿ ಜೋಡಣೆ ಯೋಜನೆ ಅನುಷ್ಠಾನಗೊಳಿಸಬೇಕು
*ಗದಗ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪಿಸಿ ಉದ್ಯೋಗ ಸೃಷ್ಟಿಸಬೇಕು
*ರೈತರ ಸಮಸ್ಯೆಗಳ ಪರಿಹಾರಕ್ಕೆ ಕೃಷಿ ಪರಿಷತ್ ಸ್ಥಾಪಿಸಬೇಕು.

## ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ಪುರಸಭೆ ಕಾರ್ಯಾಲಯದ ಕಚೇರಿ ಬಳಕೆಗೆ ಅಗತ್ಯವಿರುವ ಕಂಪ್ಯೂಟರ್ ಹಾಗೂ ಸ್ಕ್ಯಾನರ್‌ಗಳನ್ನು ಪೂರೈಸಲು ಅರ್ಹ ಮತ್ತು ಅಧಿಕೃತ ಪೂರೈಕೆದಾರರಿಂದ ಸೀಲ್ ಮಾಡಿದ ತುರ್ತು ಕೋಟೇಶನ್‌ಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಪೂರೈಕೆದಾರರು ಹಾಗೂ ವಿತರಕರು ತಮ್ಮ ದರಪಟ್ಟಿಯನ್ನು ಒಳಗೊಂಡ ಸೀಲ್ ಮಾಡಿದ ಕೋಟೇಶನ್‌ಗಳನ್ನು ಮಾರ್ಚ್ 10ರಂದು ಸಂಜೆ 4:00 ಗಂಟೆಯೊಳಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08371-262638 ಅನ್ನು ಸಂಪರ್ಕಿಸಬಹುದು ಎಂದು ಮುಂಡರಗಿ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 8ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿಗೆ ಮೈಸೂರಿನ ಶ್ರೀ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ಜಿಲ್ಲೆಯಿಂದ 6 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಗೂ ಅನ್ಯೆರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ 8ನೇ ತರಗತಿಗೆ ಪ್ರವೇಶ ನೀಡಲು ಪರೀಕ್ಷೆ ನಡೆಸಲಾಗುತ್ತದೆ. ಈ ಪ್ರವೇಶ ಪರೀಕ್ಷೆ ಎಪ್ರಿಲ್ 15ರಂದು ಬೆಳಿಗ್ಗೆ 10 ಗಂಟೆಗೆ ಮೈಸೂರಿನ ಯಾದವಗಿರಿಯ ಶ್ರೀ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ನಡೆಯಲಿದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶಾಲೆಗೆ ಪ್ರವೇಶ ಪಡೆಯಲು ಪರೀಕ್ಷೆಗೆ ಹಾಜರಾಗಲು ನಿಗದಿತ ಅರ್ಜಿ ನಮೂನೆಯನ್ನು ಸಮಾಜ ಕಲ್ಯಾಣ ಇಲಾಖೆಯ ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಮಾರ್ಚ್ 25ರೊಳಗಾಗಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 107, ಜಿಲ್ಲಾಡಳಿತ ಭವನ, ಗದಗ ಕಚೇರಿಗೆ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಗದಗದಲ್ಲಿ ಇಂದು ರೇಷ್ಮೆ ಮೇಳ: ರೈತರು, ಯುವಕರಿಗೆ ತಜ್ಞರಿಂದ ಮಾರ್ಗದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ರೇಷ್ಮೆ ಕೃಷಿಗೆ ಪೂರಕವಾದ ಉತ್ತಮ ಭೂಮಿ ಲಭ್ಯವಿದ್ದು, ಈ ಕುರಿತು ರೈತರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಮಾರ್ಚ್ 6ರಂದು ಬೆಳಿಗ್ಗೆ 11 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ "ರೇಷ್ಮೆ ಮೇಳ"ವನ್ನು ಆಯೋಜಿಸಲಾಗಿದೆ ಎಂದು ರೇಷ್ಮೆ ಇಲಾಖೆಯ ಉಪನಿರ್ದೇಶಕ ಕೈಲಾಸಮೂರ್ತಿ ತಿಳಿಸಿದ್ದಾರೆ.




ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೇಳದಲ್ಲಿ ಜಿಲ್ಲೆಯ ರೇಷ್ಮೆ ಕೃಷಿಯ ಸ್ಥಿತಿ-ಗತಿ ಹಾಗೂ ಭವಿಷ್ಯದ ಸಾಧ್ಯತೆಗಳ ಕುರಿತು ತಾಂತ್ರಿಕ ಅಧಿವೇಶನಗಳ ಮೂಲಕ ಚರ್ಚೆ ನಡೆಯಲಿದೆ ಎಂದು ಮಾಹಿತಿ ನೀಡಿದರು. ರೇಷ್ಮೆ ಬೆಳೆಯುವ ವಿಧಾನ, ಆಧುನಿಕ ತಂತ್ರಜ್ಞಾನಗಳ ಬಳಕೆ, ಮಾರುಕಟ್ಟೆ ಅವಕಾಶಗಳು ಸೇರಿದಂತೆ ಹಲವು ವಿಷಯಗಳ ಬಗ್ಗೆ ತಜ್ಞರು ರೈತರಿಗೆ ಮಾರ್ಗದರ್ಶನ ನೀಡಲಿದ್ದಾರೆ ಎಂದು ಹೇಳಿದರು.

ಈ ರೇಷ್ಮೆ ಮೇಳಕ್ಕೆ ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಸಿ.ಎಸ್.ಬಿ ನಿರ್ದೇಶಕ ಡಾ. ಪೆರಿಯಸ್ವಾಮಿ ಎಸ್. ಹಾಗೂ ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಮಲ್ಲೂರು ಶಿವಣ್ಣ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ರೇಷ್ಮೆ ವಿಜ್ಞಾನಿ ಡಾ. ಮಂಜುನಾಥ ಮಾತನಾಡಿ, ಜಿಲ್ಲೆಯ ಯುವಕರು ರೇಷ್ಮೆ ಉದ್ಯಮದತ್ತ ಹೆಚ್ಚಿನ ಆಸಕ್ತಿ ತೋರಬೇಕು. ಈ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಜ್ಞರ ಸಲಹೆಗಳನ್ನು ಪಡೆದುಕೊಂಡು ರೇಷ್ಮೆ ಕೃಷಿಯನ್ನು ವೃತ್ತಿಯಾಗಿ ಸ್ವೀಕರಿಸಬೇಕು ಎಂದು ಕರೆ ನೀಡಿದರು.

## ಇಂದು ರೈತರಿಂದ 'ಬೆಂಗಳೂರು ಚಲೋ'




■ವಿಜಯಸಾಕ್ಷಿ ಸುದ್ದಿ, ಗದಗ

ರೈತರ ವಿವಿಧ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಮಾರ್ಚ್ 6ರಂದು 'ಬೆಂಗಳೂರು ಚಲೋ' ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ನಟರಾಜ ಸವಡಿ ತಿಳಿಸಿದ್ದಾರೆ.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಮೂರು ಕೃಷಿ ಕಾಯ್ದೆಗಳನ್ನು ತಕ್ಷಣ ಹಿಂಪಡೆಯಬೇಕು, ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಹಾಗೂ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪರಿಕರಗಳನ್ನು ಮೊದಲಿನಂತೆ ವಿತರಿಸಬೇಕು ಎಂಬುದೂ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಈ ಹೋರಾಟ ನಡೆಸಲಾಗುತ್ತಿದೆ ಎಂದು ಹೇಳಿದರು.

ಆಲಮಟ್ಟಿ ಜಲಾಶಯದ ಎತ್ತರವನ್ನು 524.256 ಮೀಟರ್‌ಗೆ ಹೆಚ್ಚಿಸುವುದು, ಬೆಳೆಗಳಿಗೆ ಕಾನೂನಾತ್ಮಕ ಬೆಲೆ ನಿಗದಿ ಮಾಡುವುದು, ಜಲಜೀವನ ಮಿಷನ್ ಅಡಿಯಲ್ಲಿ ಪ್ರತಿ ಹಳ್ಳಿಗೂ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡುವುದು ಹಾಗೂ ಮಾಲಿನ್ಯಕಾರಕ ಕಾರ್ಖಾನೆಗಳ ಸ್ಥಾಪನೆ ತಡೆದು ಪರಿಸರ ಸ್ನೇಹಿ ಉದ್ದಿಮೆಗಳಿಗೆ ಉತ್ತೇಜನ ನೀಡಬೇಕು ಎಂಬ ಬೇಡಿಕೆಗಳನ್ನೂ ಸರ್ಕಾರದ ಮುಂದೆ ಇಡಲಾಗುವುದು ಎಂದು ತಿಳಿಸಿದರು.

ರೈತ ನಾಯಕಿ ರೇಖಾ ಜಡಿ ಮಾತನಾಡಿ, ರೈತರಿಗೆ ಸಕಾಲದಲ್ಲಿ ಬೀಜ ಮತ್ತು ಗೊಬ್ಬರ ಪೂರೈಕೆ ಮಾಡಬೇಕು, ನದಿಗಳ ನೀರನ್ನು ಸಮರ್ಪಕವಾಗಿ ಹರಿಸಬೇಕು ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿ ಆಡಳಿತಾತ್ಮಕ ಸುಧಾರಣೆ ತರಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಮುಖಂಡರಾದ ವಿಶ್ವನಾಥಯ್ಯ ಹಿರೇಮಠ, ಮಲ್ಲಿಕಾರ್ಜುನ ಹಿರೇಮಠ, ಬಸವರಾಜ ಅಗಸಿಬಾಗಿಲು, ಯಲ್ಲಪ್ಪ ಜಡಿ, ಸಿದ್ದಪ್ಪ ಕಳಗಂಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೋಡಿಕೊಪ್ಪ ಶಾಲೆಯ ವಾರ್ಷಿಕೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೋಡಿಕೊಪ್ಪ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವವು ಮಾ. 6ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ ಎಂದು ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾರ್ಷಿಕೋತ್ಸವದ ನಿಮಿತ್ತ ಸರಸ್ವತಿ ಪೂಜೆ, ತಾಯಂದಿರ ಪಾದಪೂಜೆ, ವಿಜ್ಞಾನ ವಸ್ತುಪ್ರದರ್ಶನ, ವಿಜ್ಞಾನ ಪ್ರಯೋಗಾಲಯ, ಭಾಷಾ ಪ್ರಯೋಗಾಲಯ, ವಾಚನಾಲಯ, 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನವನ್ನು ರೋಣ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್. ಕಾಂಬೋಗಿ, ಪ.ಪಂ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಉದ್ಘಾಟಿಸಲಿದ್ದಾರೆ.

ಎಸ್‌ಡಿಎಂಸಿ ಅಧ್ಯಕ್ಷ ಹುಲಗಪ್ಪ ಬಂಡಿವಡ್ಡರ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕ್ಷೇತ್ರ ಸಮನ್ವಯಾಧಿಕಾರಿ ಪಿ.ಎಚ್. ಫಣಿಬಂದ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಆರ್. ಎಲ್. ನಾಯಕ, ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ, ತಾಲೂಕಾ ದೈಹಿಕ ಶಿಕ್ಷಣಾಧಿಕಾರಿ ಆರ್.ಎಸ್. ನರೇಗಲ್ಲ, ನರೇಗಲ್ಲ ಸಿಆರ್‌ಪಿ ಜ್ಯೋತಿ ಬೇಲೇರಿ, ಪತ್ರಕರ್ತ ಚಂದ್ರು ರಾಥೋಡ, ಪ.ಪಂ ಮಾಜಿ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬ್ರ. ಕು. ಸವಿತಕ್ಕ, ಎಸ್‌ಡಿಎಂಸಿ ಉಪಾಧ್ಯಕ್ಷೆ ರಾಧಾ ಬದಾಮಿ ಹಾಗೂ ಸರ್ವ ಸದಸ್ಯರು ಆಗಮಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬಸ್ ನಿಲ್ದಾಣಗಳಲ್ಲಿ ರಾಜ್ಯ ಬಜೆಟ್ ನೇರ ಪ್ರಸಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಸರ್ಕಾರದ 2026-27ನೇ ಸಾಲಿನ ರಾಜ್ಯ ಬಜೆಟ್ ಅನ್ನು ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 6ರಂದು ಶುಕ್ರವಾರ ವಿಧಾನಸೌಧದಲ್ಲಿ ಮಂಡಿಸಲಿದ್ದಾರೆ.

17ನೇ ಬಾರಿ ಬಜೆಟ್ ಮಂಡಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಮೂಲಕ ದಾಖಲೆಯನ್ನು ನಿರ್ಮಿಸಿದ್ದಾರೆ. ಈ ಬಜೆಟ್ ಮಂಡನೆಯ ನೇರ ಪ್ರಸಾರವನ್ನು ರಾಜ್ಯದ ಜನತೆಗೆ ತಲುಪಿಸುವ ಉದ್ದೇಶದಿಂದ ಆಯ್ದ ಬಸ್ ನಿಲ್ದಾಣಗಳ ಟಿವಿಗಳಲ್ಲಿ ಪ್ರದರ್ಶನ ಮಾಡಲು ವ್ಯವಸ್ಥೆ ಮಾಡಲಾಗಿದೆ.

ರಾಜ್ಯದಾದ್ಯಂತ ಇರುವ ಸುಮಾರು 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಬಜೆಟ್ ಮಂಡನೆಯ ನೇರ ಪ್ರಸಾರವನ್ನು ಪ್ರದರ್ಶಿಸಲು ಯೋಜಿಸಲಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ವೃತ್ತಿ ಸೊಲ್ಯೂಷನ್ಸ್ ಲಿಮಿಟೆಡ್ ಸಂಸ್ಥೆ ರಾಜ್ಯದ ವಿವಿಧ ಬಸ್ ನಿಲ್ದಾಣಗಳಲ್ಲಿ ಅಳವಡಿಸಿರುವ ಡಿಜಿಟಲ್ ಡಿಸ್‌ಪ್ಲೇ (ಐಇಅ) ಪರದೆಗಳ ಮೂಲಕ ಈ ನೇರ ಪ್ರಸಾರವನ್ನು ಒದಗಿಸಲಿದೆ.

ವಿಧಾನಸೌಧದಲ್ಲಿ ನಡೆಯುವ ಬಜೆಟ್ ಮಂಡನೆ ಹಾಗೂ ನಂತರ ನಡೆಯುವ ಮುಖ್ಯಮಂತ್ರಿಗಳ ಪತ್ರಿಕಾಗೋಷ್ಠಿಯನ್ನೂ ಇದೇ ಪರದೆಗಳ ಮೂಲಕ ನೇರವಾಗಿ ವೀಕ್ಷಿಸುವ ಅವಕಾಶ ಸಾರ್ವಜನಿಕರಿಗೆ ಲಭ್ಯವಾಗಲಿದೆ.

ಈ ಮೂಲಕ ರಾಜ್ಯದ ಜನತೆಗೆ ಸರ್ಕಾರದ ಬಜೆಟ್ ಕುರಿತು ನೇರವಾಗಿ ಮಾಹಿತಿ ಪಡೆಯುವ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

**ದೇಶದ ನಿಜವಾದ ಸಂಪತ್ತು ಯುವಜನರು ಮತ್ತು ಮಹಿಳೆಯರು–ಶ್ರೀ ರಂಭಾಪುರಿ ಜಗದ್ಗುರುಗಳು**

# ಯುವಜನರನ್ನು ಧರ್ಮದತ್ತ ಸೆಳೆಯುವ ಕೆಲಸ ಮಾಡಬೇಕು



"ಯುವಜನರು ಹಾಗೂ ಮಹಿಳೆಯರು ದೇಶದ ನಿಜವಾದ ಸಂಪತ್ತು. ಇವರನ್ನು ಧರ್ಮದತ್ತ ಸೆಳೆಯುವ ಕಾರ್ಯ ನಡೆಯಬೇಕು. ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲೂ ಇದೆ."

**– ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ** ಮಹಾಸ್ವಾಮಿಗಳು.

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಯುವಜನರು ಹಾಗೂ ಮಹಿಳೆಯರು ದೇಶದ ನಿಜವಾದ ಸಂಪತ್ತಾಗಿದ್ದು, ಅವರನ್ನು ಧರ್ಮದತ್ತ ಸೆಳೆಯುವ ಕೆಲಸ ಸಮಾಜದಲ್ಲಿ ನಡೆಯಬೇಕು ಎಂದು ಶ್ರೀ ರಂಭಾಪುರಿ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಗುರುವಾರ ಶ್ರೀ ರಂಭಾಪುರಿ ಪೀಠದಲ್ಲಿ ನಡೆದ ಜಾತ್ರಾ ಮಹೋತ್ಸವ ಸಮಿತಿಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರ ಸಭೆಯಲ್ಲಿ ಆಶೀರ್ವಚನ ನೀಡಿದ ಅವರು, ಇಂದಿನ ಸಮಾಜದಲ್ಲಿ ವ್ಯಕ್ತಿ-ವ್ಯಕ್ತಿಗಳ ನಡುವೆ ಹಾಗೂ ಧರ್ಮಗಳ ನಡುವೆ ಸಂಘರ್ಷಗಳು ನಡೆಯುತ್ತಿರುವ ಸಂದರ್ಭದಲ್ಲಿ ಶಾಂತಿ ಮತ್ತು ಸಾಮರಸ್ಯ ಬೆಳೆಸುವ ಕಾರ್ಯ ಅಗತ್ಯವಾಗಿದೆ ಎಂದು ಹೇಳಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವ ಈ ಬಾರಿ ಯಶಸ್ವಿಯಾಗಿ ನೆರವೇರಿದ್ದು, ಇದರ ಯಶಸ್ಸಿಗೆ ಬಾಳೆಹೊನ್ನೂರು ಜನರ ಸಹಕಾರವೇ ಕಾರಣವಾಗಿದೆ ಎಂದು ಹೇಳಿದರು.

ಪೀಠದಲ್ಲಿ ಅನ್ನದಾಸೋಹಕ್ಕೆ ವಿಶೇಷ ಆದ್ಯತೆ ನೀಡಲಾಗಿದ್ದು, ಯಾರೂ ಹಸಿದ ಹೊಟ್ಟೆಯಿಂದ ಹಿಂದಿರುಗಬಾರದು ಎಂಬ ಉದ್ದೇಶದಿಂದ ದಿನ-ರಾತ್ರಿ ನಿರಂತರ ದಾಸೋಹ ವ್ಯವಸ್ಥೆ ಮಾಡಲಾಗಿದೆ. ಈ ಕಾರ್ಯದಲ್ಲಿ ಸುಮಾರು 50-60 ಸಿಬ್ಬಂದಿ ಹಾಗೂ ಶಿವಮೊಗ್ಗ ಮತ್ತು ಬಾಳೆಹೊನ್ನೂರು ಐಟಿಐ ಕಾಲೇಜಿನ 80ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇವೆ ಸಲ್ಲಿಸಿದ್ದಾರೆ ಎಂದು ತಿಳಿಸಿದರು.

ಮುಂದಿನ ವರ್ಷವೂ ಜಾತ್ರಾ ಮಹೋತ್ಸವದಲ್ಲಿ ಯುವಕರು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಧರ್ಮಪೀಠದ ಕಾರ್ಯಗಳಲ್ಲಿ ಸಕ್ರಿಯರಾಗಬೇಕು ಎಂದು ಜಗದ್ಗುರುಗಳು ಕರೆ ನೀಡಿದರು.

ಜಾತ್ರಾ ಮಹೋತ್ಸವ ಸಮಿತಿಯ ಪ್ರಮುಖ ಎಂ.ಎಸ್. ಚನ್ನಕೇಶವ ಮಾತನಾಡಿ, ಈ ಬಾರಿ ಜಾತ್ರಾ ಮಹೋತ್ಸವದ ಅಂಗವಾಗಿ ಸುಮಾರು 3 ಕಿ.ಮೀ ವ್ಯಾಪ್ತಿಯಲ್ಲಿ ವಿದ್ಯುತ್ ದೀಪಾಲಂಕಾರ ಹಾಗೂ ಅಲಂಕಾರ ಮಾಡಲಾಗಿದೆ. ಮುಂದಿನ ವರ್ಷ ಇನ್ನಷ್ಟು ವೈಭವದಿಂದ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಹೇಳಿದರು.

## ಬೀಳ್ಕೊಡುಗೆ ಎಂದರೆ ಜೀವನದ ಹೊಸ ಹಂತದ ಆರಂಭ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೀಳ್ಕೊಡುಗೆ ಸಮಾರಂಭವು ಸುಖ ಮತ್ತು ದುಃಖಗಳ ಸಮ್ಮಿಶ್ರಣವಾಗಿದೆ ಎಂದು ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ ಹೇಳಿದರು.

ಸಮೀಪದ ತೋಟಗಂಟಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಂದಿನ ಹಂತಕ್ಕೆ ಸಾಗುತ್ತಿರುವ ಸಂತೋಷ ಒಂದು ಕಡೆ ಇದ್ದರೆ, ಕಲಿತ ಶಾಲೆ, ಗುರುಗಳು ಹಾಗೂ ಸಹಪಾಠಿಗಳನ್ನು ಬಿಟ್ಟು ಹೋಗುವ ದುಃಖವೂ ಸಹಜವಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ತಮ್ಮ ಕಲಿತ ಶಾಲೆಯನ್ನು ಮತ್ತು ಶಿಕ್ಷಕರನ್ನು ಎಂದಿಗೂ ಮರೆಯಬಾರದು. ಭವಿಷ್ಯದಲ್ಲಿ ಉತ್ತಮ ಸ್ಥಾನ ತಲುಪಿದ ನಂತರ ಶಾಲೆಯ ಅಭಿವೃದ್ಧಿಗೆ ಸಹಾಯ ಮಾಡಬೇಕು ಎಂದು ಸಲಹೆ ನೀಡಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ವಿದ್ಯಾರ್ಥಿಗಳು ಪ್ರದರ್ಶಿಸಿದ ವಿಜ್ಞಾನ ಮಾದರಿಗಳು ಅತ್ಯುತ್ತಮವಾಗಿದ್ದು, ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಭವಿಷ್ಯದಲ್ಲಿ ವಿಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು ಎಂದು ಹೇಳಿದರು. ಮುಂದಿನ ಪ್ರೌಢಶಾಲಾ ಹಂತದಲ್ಲಿಯೂ ವೈಜ್ಞಾನಿಕ ಚಟುವಟಿಕೆಗಳಲ್ಲಿ ಭಾಗವಹಿಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.

### ಹಿಂದೂ ಮಹಾಸಾಗರದಲ್ಲಿ ಇರಾನ್ ನೌಕೆ ಮೇಲೆ ದಾಳಿ: 'ರಾಜಿ ಮಾಡಿಕೊಂಡ ಪ್ರಧಾನಿ ಕಾರ್ಯತಂತ್ರದ ಸ್ವಾಯತ್ತತೆ ಬಿಟ್ಟುಕೊಟ್ಟರು: ರಾಹುಲ್ ಟೀಕೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹಿಂದೂ ಮಹಾಸಾಗರದಲ್ಲಿ ಇರಾನ್ ಯುದ್ಧನೌಕೆ ಐರಿಸ್ ದೇನಾದ ಮೇಲೆ ಅಮೆರಿಕಾ ದಾಳಿ ಮಾಡಿದ ಒಂದು ದಿನದ ನಂತರ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ವಾಗ್ದಾಳಿ ನಡೆಸಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷ ಭಾರತೀಯ ಉಪಖಂಡದ ಹತ್ತಿರ ಬಂದಿದ್ದರೂ ಅವರು ಮೌನವಾಗಿದ್ದಾರೆ ಎಂದು ಆರೋಪಿಸಿದ್ದಾರೆ.

"ದೇಶಕ್ಕೆ ಈ ಸಮಯದಲ್ಲಿ ಸ್ಥಿರವಾದ ಮತ್ತು ದೃಢವಾದ ನಾಯಕತ್ವ ಬೇಕು, ಆದರೆ ನಮಗೆ ಸಿಕ್ಕಿರುವುದು 'ರಾಜಿ ಮಾಡಿಕೊಂಡ ದುರ್ಬಲ ಪ್ರಧಾನಿ', ಅವರು ನಮ್ಮ ಕಾರ್ಯತಂತ್ರದ ಸ್ವಾಯತ್ತತೆಯನ್ನು (ಸ್ವತಂತ್ರ ನಿರ್ಧಾರ ಶಕ್ತಿ) ಬಿಟ್ಟು-ಕೊಟ್ಟಿದ್ದಾರೆ." ಎಂದು ಹೇಳಿದ್ದಾರೆ.

ಜಗತ್ತು ಅಸ್ಥಿರ ಹಂತವನ್ನು ಪ್ರವೇಶಿಸಿದೆ ಮತ್ತು "ಬಿರುಗಾಳಿಯ ಸಮುದ್ರಗಳು ಮುಂದಿವೆ" ಎಂದು ಹೇಳಿರುವ ರಾಹುಲ್ ಗಾಂಧಿ "ಭಾರತದ ತೈಲ ಸರಬರಾಜು ಅಪಾಯದಲ್ಲಿದೆ, ನಮ್ಮ ಆಮದುಗಳಲ್ಲಿ 40% ಕ್ಕಿಂತ ಹೆಚ್ಚು ಹಾರ್ಮುಜ್ ಜಲಸಂಧಿಯ ಮೂಲಕ ಸಾಗುತ್ತವೆ.

## "ಸಾವಿರಾರು ಭಕ್ತರ ಸಮ್ಮುಖದಲ್ಲಿ ಬಂಡೆ ರಂಗನಾಥ ಸ್ವಾಮಿ ರಥೋತ್ಸವ – ಮಾಜಿ ಶಾಸಕ ಸಿರಾಜ್ ಶೇಖ್ ಭೇಟಿ"

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿರುವ ಪ್ರಸಿದ್ಧ ಶ್ರೀ ಬಂಡೆ ರಂಗನಾಥ ಸ್ವಾಮಿ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿತು. ರಥೋತ್ಸವದ ಅಂಗವಾಗಿ ವಿಜಯನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಹಗರಿಬೊಮ್ಮನಹಳ್ಳಿ ಕ್ಷೇತ್ರದ ಮಾಜಿ ಶಾಸಕ ಸಿರಾಜ್ ಶೇಖ್ ದೇವಾಲಯಕ್ಕೆ ಆಗಮಿಸಿ ಶ್ರೀ ಬಂಡೆ ರಂಗನಾಥ ಸ್ವಾಮಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.



ರಥೋತ್ಸವದ ಅಂಗವಾಗಿ ದೇವರ ಉತ್ಸವ ಮೂರ್ತಿಯನ್ನು ಅಲಂಕೃತ ರಥದಲ್ಲಿ ಪ್ರತಿಷ್ಠಾಪಿಸಿ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿ ವಿಧಾನಗಳನ್ನು ನೆರವೇರಿಸಲಾಯಿತು. ಭಕ್ತರು ಜಯಘೋಷಣೆ ಕೂಗಿ ಭಕ್ತಿಭಾವದಿಂದ ರಥವನ್ನು ಎಳೆದರು. ದೇವಸ್ಥಾನದ ಅರ್ಚಕರು ವೇದ ಮಂತ್ರಗಳೊಂದಿಗೆ ವಿವಿಧ ಪೂಜೆ ಪುನಸ್ಕಾರಗಳನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಶ್ರೀ ಬಂಡೆ ರಂಗನಾಥ ಸ್ವಾಮಿ ದೇವಸ್ಥಾನ ಸಮಿತಿಯಿಂದ ಮಾಜಿ ಶಾಸಕ ಸಿರಾಜ್ ಶೇಖ್ ಅವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಸಿರಾಜ್ ಶೇಖ್ ಅವರು, ದೇವಾಲಯಗಳು ಸಮಾಜದಲ್ಲಿ ಭಕ್ತಿ, ಸಂಸ್ಕೃತಿ ಹಾಗೂ ಸೌಹಾರ್ದತೆಯನ್ನು ಬೆಳೆಸುವ ಪವಿತ್ರ ಕೇಂದ್ರಗಳಾಗಿವೆ. ಇಂತಹ ರಥೋತ್ಸವಗಳು ಜನರಲ್ಲಿ ಧಾರ್ಮಿಕ ಭಾವನೆಗಳನ್ನು ಹೆಚ್ಚಿಸಿ ಸಮಾಜದಲ್ಲಿ ಏಕತೆಯನ್ನು ಬಲಪಡಿಸುತ್ತವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಡಾ. ತಿಪ್ಪೇಸ್ವಾಮಿ ವೆಂಕಟೇಶ್, ಹುಡೇದ ಗುರು ಬಸವರಾಜ್, ಸುರೇಶ್ ರಾಥೋಡ್, ಸೋಗಿ ಕೊಟ್ರೇಶ್, ರಾಜ್, ಎಣ್ಣಿ ಇಬ್ರಾಹಿಂ, ಧರ್ಮಕರ್ತರಾದ ಉದಯ್ ಭಾಸ್ಕರ ರಾವ್, ಸಮಿತಿಯ ಅಧ್ಯಕ್ಷ ಬಿ. ಲಕ್ಷ್ಮಣ, ಉಪಾಧ್ಯಕ್ಷ ಗಂಗಾಧರ ಗೌಡ, ಸರಾಯಿದ ಮಂಜುನಾಥ್, ಕಾರ್ಯದರ್ಶಿ ಸುಣಗಾರ ಪರಶುರಾಮ್, ಖಜಾಂಚಿ ದೇವಿಪ್ರಸಾದ್, ಸದಸ್ಯರಾದ ಕಡ್ಡಿ ಚೆನ್ನಪ್ಪ, ಬಣಕಾರ ಕೊಟ್ರೇಶ್, ಸಬುಟಿ ಹರೀಶ್, ಹಿರಿಯರಾದ ಗೌರಜ್ಜನವರ ಬಸವರಾಜಪ್ಪ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಮೆಹಬೂಬ್ ಬಾಷಾ, ಮುಖಂಡರಾದ ಇಸ್ಮಾಯಿಲ್, ದೇವಸ್ಥಾನದ ಅರ್ಚಕರಾದ ಪೂಜಾರ್ ಯಲ್ಲಪ್ಪ, ಪೂಜಾರ್ ರಂಗನಾಥ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

## ಎಲ್.ಎಸ್. ಅರಳಹಳ್ಳಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಯು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸತತ 32 ವರ್ಷಗಳಿಂದ ನೂರಕ್ಕೆ ನೂರರಷ್ಟು ಫಲಿತಾಂಶ ದಾಖಲಿಸುವ ಮೂಲಕ ರಾಜ್ಯದಲ್ಲಿಯೇ ಉತ್ತಮ ಶಾಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದು, ಈ ಶಾಲೆಯ ಮುಖ್ಯೋಪಾಧ್ಯಾಯರಾದ ಎಲ್. ಎಸ್. ಅರಳಹಳ್ಳಿ ಅವರನ್ನು ಗದಗ ನಗರದ ಅಂಬೇಡ್ಕರ್ ಭವನದಲ್ಲಿ ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಶೈಕ್ಷಣಿಕ ಸಮಾವೇಶದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಸವರಾಜ ಹೊರಟ್ಟಿ, ಪರಮಪೂಜ್ಯ ಬೈರನಹಟ್ಟಿ ಶಾಂತಲಿಂಗ ಮಹಾಸ್ವಾಮಿಗಳು, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಧಾರವಾಡದ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ, ಗದಗ ಜಿಲ್ಲಾ ಉಪನಿರ್ದೇಶಕರಾದ ಆರ್. ಎಸ್. ಬುರಡಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ್, ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್ ನಾಣ್ಕಿ ನಾಯಕ, ಜಿಲ್ಲಾ ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ, ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಲ್.ಎಸ್. ಅರಳಹಳ್ಳಿ, ವ್ಹಿ.ಸಿ. ಬೆಂಡಿಗೇರಿ, ಟಿ.ಎಸ್. ಹೂಗಾರ, ವ್ಹಿ.ಎ. ಪಾಟೀಲ, ಮಂಜುಳಾ ಗುಡಿಮನಿ, ಲಕ್ಷ್ಮೀ ರಿತ್ತಿ, ಎಂ.ಬಿ. ಕಲ್ಲೂರ ಮುಂತಾದವರಿದ್ದರು.

## ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪರಿಂದ ಇಫ್ತಿಯಾರ್




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ 21ನೇ ವಾರ್ಡಿನ ರಾಮನಗರದ ಮಸೀದಿಯಲ್ಲಿ ಪವಿತ್ರ ರಂಜಾನ್ ಮಾಸದ ಅಂಗವಾಗಿ ಮುಸ್ಲಿಂ ಬಾಂಧವರಿಗಾಗಿ ರೋಜಾ ಮುರಿದ ನಂತರ ವಿಶೇಷ ಭೋಜನ ವ್ಯವಸ್ಥೆಯನ್ನು ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ ಏರ್ಪಡಿಸಿದ್ದರು.

ರಂಜಾನ್ ಮಾಸವು ಆತ್ಮಶುದ್ಧಿ, ಉಪವಾಸ ಹಾಗೂ ಪರಸ್ಪರ ಸಹೋದರತ್ವದ ಸಂಕೇತವಾಗಿದೆ. ಈ ಹಿನ್ನೆಲೆಯಲ್ಲಿ ರೋಜಾ ಮುಕ್ತಾಯದ ನಂತರ ಮುಸ್ಲಿಂ ಬಾಂಧವರು ಭೋಜನದಲ್ಲಿ ಪಾಲ್ಗೊಂಡು ಸಂತೋಷ ವ್ಯಕ್ತಪಡಿಸಿದರು. ಸಮಾಜದಲ್ಲಿ ಎಲ್ಲ ಧರ್ಮಗಳ ನಡುವೆ ಸೌಹಾರ್ದತೆ ಮತ್ತು ಏಕತೆ ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ ತಿಳಿಸಿದರು.

ಈ ಸಂದರ್ಭದಲ್ಲಿ ಮಸೀದಿ ಕಮಿಟಿಯವರು ಪುರಸಭೆ ಅಧ್ಯಕ್ಷರನ್ನು ಸನ್ಮಾನಿಸಿದರು. ಬಳಿಕ ಮಸೀದಿಯಲ್ಲಿ ನಮಾಜ್ ಮುನ್ನ ವಜುಖಾನ (ಕೈ, ಮುಖ, ಕಾಲು ತೊಳೆಯುವ ವ್ಯವಸ್ಥೆ) ನಿರ್ಮಿಸಿಕೊಡುವಂತೆ ಸೇರಿದಂತೆ ಇನ್ನೂ ಹಲವು ಬೇಡಿಕೆಗಳನ್ನು ಅಧ್ಯಕ್ಷರಿಗೆ ಮನವಿ ಮಾಡಿದರು. ಮನವಿ ಸ್ವೀಕರಿಸಿದ ಅಧ್ಯಕ್ಷರು ಪುರಸಭೆಯ ಅನುದಾನದಲ್ಲಿ ಶೀಘ್ರದಲ್ಲೇ ಈ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸೈಯದ್ ನಜೀರ್ ಸಾಬ್ (ಮುತುವಲ್ಲಿ), ಮೈಬೂಬ್ ಸಾಬ್ (ವೈಸ್ ಮುತುವಲ್ಲಿ), ಸೆಕ್ರೆಟರಿ ಎಣ್ಣೆ ಭಾಷಾಸಾಬ್, ಖಜಾಂಚಿ ಕೆಜಿನ್ ಅಲ್ಲಾಭಕ್ಷಿ, ಕೆ. ಶ್ಯಾಬುದ್ದೀನ್ (ಮಾನವ ಹಕ್ಕು ಜಿಲ್ಲಾ ಕಾರ್ಯಾಧ್ಯಕ್ಷರು), ಮಸ್ತಾನ್ ಸಾಬ್, ಟೈಲರ್ ನಜೀರ್, ಜಾಂಗೀರ್ ಸಾಬ್ (ಕೆಇಬಿ ಗುತ್ತಿಗೆದಾರರು), ಮೆಕ್ಯಾನಿಕ್ ಬಶೀರ್, ಟೈಲರ್ ಯೂಸುಫ್ ಸಾಬ್, ತಂಬ್ರಹಳ್ಳಿ ಹುಸೇನ್ ಸಾಬ್, ಯು. ಬಾಬುವಲಿ (ಪುರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರು), ಗುಂಡ್ರು ಹನುಮಂತಪ್ಪ (ಮಾಜಿ ಪುರಸಭೆ ಸದಸ್ಯರು) ಸೇರಿದಂತೆ ಅನೇಕ ಮುಸ್ಲಿಂ ಬಾಂಧವರು ಉಪಸ್ಥಿತರಿದ್ದರು.

## ಸಂಭ್ರಮದ ಬಂಡೆ ರಂಗನಾಥೇಶ್ವರ ಬ್ಯಾಟಿ ಗಿಡ ಉತ್ಸವ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿಯ ಇತಿಹಾಸ ಪ್ರಸಿದ್ಧ ಶ್ರೀ ಬಂಡೆ ರಂಗನಾಥ ಸ್ವಾಮಿ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವ ನಿಮಿತ್ತವಾಗಿ ನಡೆದ ಬ್ಯಾಟಿ ಗಿಡ ಉತ್ಸವ ಬುಧವಾರ ಸಂಭ್ರಮದಿಂದ ಜರುಗಿತು.



ತುಂಗಭದ್ರ ಹಿನ್ನೀರಿನ ದಂಡೆಯ ಮೇಲೆ ನೆಲೆಸಿರುವ ಶ್ರೀ ಬಂಡೆ ರಂಗನಾಥ ಸ್ವಾಮಿ ಹಾಗೂ ಲಕ್ಷ್ಮೀ ದೇವಿಗೆ ಕಳೆದ ಒಂದು ವಾರದಿಂದ ಪೂಜೆ, ಹೋಮ, ಹವನ ಇತ್ಯಾದಿ ಆಚರಣೆಗಳು ಅರ್ಚಕರಿಂದ ಶಾಸ್ತ್ರೋಕ್ತವಾಗಿ ಜರುಗಿದವು. ಬಂಡೆ ರಂಗನಾಥೇಶ್ವರ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಲಾಯಿತು. ಮೆರವಣಿಗೆ ಮುಖಾಂತರ ಗ್ರಾಮದ ಹೊರವಲಯದ ಹತ್ತಿರದಲ್ಲಿ (ಮುಳ್ಳುಕಂಟಿ ಗಿಡ) ಬ್ಯಾಟಿ ಗಿಡ ತೆಗೆದುಕೊಂಡು ಬಂದು ಪೂಜಿಸಲಾಯಿತು. ಬೆಟ್ಟದ ಕೆಳಗಡೆ ಇರುವ ತೇರು ಬೀದಿಗೆ ಮೆರವಣಿಗೆ ಮೂಲಕ ತರಲಾಯಿತು. ಬ್ಯಾಟಿ ಗಿಡವನ್ನು ವಾಲ್ಮೀಕಿ ಸಮುದಾಯದ ಯುವಕರು ಹೊತ್ತುಕೊಂಡು ಮೇಳಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಾ ಕುಣಿಯುತ್ತಿದ್ದು ಭಕ್ತರನ್ನು ಭಾವಪರವಶಗೊಳಿಸಿದರು. ನೆರೆದ ಭಕ್ತರು ಬಾಳೆಹಣ್ಣು, ಉತ್ತತ್ತಿ, ದವನ ಹೂವುಗಳನ್ನು ಅರ್ಪಿಸಿ ಧನ್ಯತೆ ಮೆರೆದರು. ನಂತರ ಬ್ಯಾಟಿ ಗಿಡವನ್ನು ಬೆಟ್ಟದ ಮೇಲೆ ತೆ-ಗೆದುಕೊಂಡು ಹೋದರು.

ವಿವಿಧ ಕಡೆಯಿಂದ ಜಾತ್ರಾ ಮಹೋತ್ಸವಕ್ಕೆ ಈ ಬಾರಿ ಭಾರೀ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ಬೆಟ್ಟದ ಮೇಲೆ ಸರತಿ ಸಾಲಿನಲ್ಲಿ ನಿಂತು ದರ್ಶನ ಪಡೆದರು. ತಂಬ್ರಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿಯವರು ಸೂಕ್ತ ಬಂದೋಬಸ್ತ ವ್ಯವಸ್ಥೆ ಕಲ್ಪಿಸಿದ್ದರು.

ಈ ಸಂದರ್ಭದಲ್ಲಿ ದೇವಸ್ಥಾನ ಆಡಳಿತ ಮಂಡಳಿಯ ಪದಾಧಿಕಾರಿಗಳು, ಮುಖಂಡರು ಹಾಗೂ ಸುತ್ತಲಿನ ಹತ್ತಾರು ಹಳ್ಳಿಗಳ ಭಕ್ತರು ಪಾಲ್ಗೊಂಡಿದ್ದರು.

## ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷರಾಗಿ ಬಸನಗೌಡ ಪಾಟೀಲ ಮೂರನೇ ಬಾರಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪಟ್ಟಣದ ಪಿಕಾರ್ಡ್ ಬ್ಯಾಂಕಿನ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಬಸನಗೌಡ (ರಾಜು) ವೆಂಕನಗೌಡ ಪಾಟೀಲ ಅಧ್ಯಕ್ಷರಾಗಿ ಹಾಗೂ ಫಕ್ಕೀರಪ್ಪ ಯಲ್ಲಪ್ಪ ಇಚ್ಚಂಗಿ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಹಾಗೂ ಚುನಾವಣಾಧಿಕಾರಿ ಪುಷ್ಪಾ ಕಡಿವಾಳ ಘೋಷಿಸಿದರು.

ಆರಂಭದಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಸನಗೌಡ ಪಾಟೀಲ ಹಾಗೂ ನೀಲಪ್ಪ ಹತ್ತಿ, ಉಪಾಧ್ಯಕ್ಷ ಸ್ಥಾನಕ್ಕೆ ಫಕ್ಕೀರಪ್ಪ ಇಚ್ಚಂಗಿ ಮತ್ತು ಮಂಜುನಾಥ ಶಂಕಿನದಾಸರ ಸ್ಪರ್ಧೆ ಇದ್ದು, ಕೊನೆ ಕ್ಷಣದಲ್ಲಿ ರಾಜಕೀಯ ತಂತ್ರಗಾರಿಕೆಯಿಂದ ನೀಲಪ್ಪ ಹತ್ತಿ ಹಾಗೂ ಮಂಜುನಾಥ ದಾಸರ ತಮ್ಮ ನಾಮಪತ್ರಗಳನ್ನು ಹಿಂಪಡೆದ ಕಾರಣ ಬಸನಗೌಡ ಪಾಟೀಲ ಮತ್ತು ಫಕ್ಕೀರಪ್ಪ ಇಚ್ಚಂಗಿ ಅವಿರೋಧವಾಗಿ ಆಯ್ಕೆಯಾದರು.

ಬಸನಗೌಡ ಪಾಟೀಲ ಸತತ ಮೂರನೇ ಬಾರಿ ಅಧ್ಯಕ್ಷರಾಗಿರುವುದು ವಿಶೇಷವಾಗಿದೆ.

ಫಲಿತಾಂಶ ಘೋಷಣೆಯಾಗುತ್ತಿದ್ದಂತೆ ಬ್ಯಾಂಕ್ ಎದುರು ಜಮಾಯಿಸಿದ್ದ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.



### ನರೇಗಲ್ಲದಲ್ಲಿ ಪುಟ್ಟರಾಜ ಕವಿ ಗವಾಯಿಗಳ ಜನ್ಮದಿನೋತ್ಸವ ಆಚರಣೆ

# ಅಂಧರ ಬಾಳಿಗೆ ಸಂಗೀತದ ಬೆಳಕು ನೀಡಿದವರು ಪುಟ್ಟರಾಜ ಕವಿ ಗವಾಯಿಗಳು



**ಪುಟ್ಟರಾಜ ಕವಿ ಗವಾಯಿಗಳ ಜನ್ಮದಿನೋತ್ಸವ ಆಚರಣೆ**

ನರೇಗಲ್ಲ ಬಸ್ ನಿಲ್ದಾಣದ ಸಮೀಪದ ಮಾರುತಿ ದೇವಸ್ಥಾನ ಆವರಣದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಆಟೋ ಚಾಲಕರ ಸಂಘದ ವತಿಯಿಂದ ಪಂ. ಪುಟ್ಟರಾಜ ಕವಿ ಗವಾಯಿಗಳ ಜನ್ಮದಿನೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಠಾಧೀಶರು, ಸ್ಥಳೀಯ ಗಣ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿ ಪುಟ್ಟರಾಜ ಕವಿ ಗವಾಯಿಗಳ ಸಾಧನೆ ಮತ್ತು ಸೇವೆಯನ್ನು ಸ್ಮರಿಸಿದರು.

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಂಧರಿಗೆ ಸಂಗೀತ ಶಿಕ್ಷಣವನ್ನು ನೀಡುವ ಮೂಲಕ ಅವರ ಜೀವನಕ್ಕೆ ಹೊಸ ಬೆಳಕು ನೀಡಿದ ಮಹಾನ್ ವ್ಯಕ್ತಿ ಪಂ. ಪುಟ್ಟರಾಜ ಕವಿ ಗವಾಯಿಗಳವರು ಎಂದು ಸಿದ್ದನಕೊಳ್ಳದ ಧರ್ಮದರ್ಶಿ ಡಾ. ಶಿವಕುಮಾರ ಸ್ವಾಮೀಜಿ ಹೇಳಿದರು.

ನರೇಗಲ್ಲ ಪಟ್ಟಣದ ಬಸ್ ನಿಲ್ದಾಣದ ಸಮೀಪದ ಮಾರುತಿ ದೇವಸ್ಥಾನ ಆವರಣದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಆಟೋ ಚಾಲಕರ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪುಟ್ಟರಾಜ ಕವಿ ಗವಾಯಿಗಳ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುಟ್ಟರಾಜ ಕವಿ ಗವಾಯಿಗಳು ಅಂಧರಾಗಿದ್ದರೂ ತಮ್ಮ ಜೀವನವನ್ನು ಸಂಪೂರ್ಣವಾಗಿ ಸಂಗೀತ ಸೇವೆಗೆ ಸಮರ್ಪಿಸಿದ್ದರು. ಸಹಸ್ರಾರು ಶಿಷ್ಯರಿಗೆ ಸಂಗೀತ ಶಿಕ್ಷಣ ನೀಡಿ ಅವರನ್ನು ಸಮಾಜದಲ್ಲಿ ಗೌರವದ ಸ್ಥಾನಕ್ಕೆ ತಲುಪಿಸಿದ್ದಾರೆ. ದೇಶದ ವಿಶ್ವವಿದ್ಯಾಲಯಗಳು ಮಾಡಲಾಗದಷ್ಟು ಮಹೋನ್ನತ ಸೇವೆಯನ್ನು ಅವರು ಮಾಡಿದ್ದಾರೆ ಎಂದು ಸ್ವಾಮೀಜಿ ಹೇಳಿದರು. ದಿವ್ಯದೃಷ್ಟಿಯ ಮೂಲಕ ಸಂಗೀತ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ ಅವರ ಜೀವನ ಚರಿತ್ರೆ ಸದಾ ಸ್ಮರಣೀಯವಾಗಿರುತ್ತದೆ ಎಂದರು.

ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಅಧ್ಯಕ್ಷ ಹನಮಂತ ಅಬ್ಬಿಗೇರಿ ಮಾತನಾಡಿ, ಪುಟ್ಟರಾಜ ಕವಿ ಗವಾಯಿಗಳು ನೂರಾರು ಗ್ರಂಥಗಳನ್ನು ರಚಿಸಿ ಅಂಧರ ಬಾಳಿಗೆ ಆಶಾಕಿರಣವಾಗಿದ್ದಾರೆ. ಅವರ ಶಿಷ್ಯರು ದೇಶ-ವಿದೇಶಗಳಲ್ಲಿ ಸಂಗೀತ ಸೇವೆ ಸಲ್ಲಿಸುತ್ತಿದ್ದು, ಗದುಗಿನ ವೀರೇಶ್ವರ ಪುಣ್ಯಾಶ್ರಮದ ಕೀರ್ತಿಯನ್ನು ವಿಶ್ವದಾದ್ಯಂತ ಹರಡಿಸಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅನ್ನಸಂತರ್ಪಣೆ ಜರುಗಿ-ತು. ಮುಗಳಖೋಡ ಮಠದ ಬಸವರಾಜ ಬಸವರಡ್ಡೇರ್ ಸ್ವಾಮೀಜಿ, ಗಜೇಂದ್ರಗಡ ತಹಶೀಲ್ದಾರ ಕಿರಣಕುಮಾರ ಕುಲಕರ್ಣಿ, ಬಸನಗೌಡ ಪೊಲೀಸ್ ಪಾಟೀಲ, ಎಂ.ಎಸ್. ಧಡೆಸೂರಮಠ, ಖಾದರಬಾಷಾ ಹೂಲಗೇರಿ, ಸೋಮು ಲಕ್ಕನಗೌಡ್ರ, ತಿಮ್ಮರಡ್ಡೆಪ್ಪ ಬಂಡಿವಡ್ಡರ, ಯಲ್ಲಪ್ಪ ಮಣ್ಣೊಡ್ಡರ, ನಿಂಗಪ್ಪ ಹೊನ್ನಾಪೂರ, ಸಿರಾಜ್ ಹೊಸಮನಿ, ಯುನಿಸ್ ಹೊಸಮನಿ, ಶಿವು ಶಿರಹಟ್ಟಿ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

### ಪುಟ್ಟರಾಜ ಕವಿ ಗವಾಯಿಗಳಿಗೆ 112ನೇ ಜಯಂತಿ ಕಾರ್ಯಕ್ರಮದಲ್ಲಿ ಕೃಷ್ಣಗೌಡ ಪಾಟೀಲ್

# ಸಾಹಿತ್ಯ-ಸಂಸ್ಕೃತಿ ಉಳಿಸುವಲ್ಲಿ ಪ್ರತಿಯೊಬ್ಬರ ಪಾತ್ರ ಮಹತ್ವದ್ದು



ಪುಟ್ಟರಾಜ ಕವಿ ಗವಾಯಿಗಳ ಜಯಂತ್ಯೋತ್ಸವ ಅಂಗವಾಗಿ ನಾಡಿನ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ 31 ಜನ ಕವಿಗಳು, ಸಾಹಿತಿಗಳು ಹಾಗೂ ಸಾಧಕರಿಗೆ ಸದ್ಭಾವನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಗಣ್ಯರು ಹಾಗೂ ಸಾಹಿತ್ಯಾಸಕ್ತರು ಪಾಲ್ಗೊಂಡು ಪುಟ್ಟರಾಜ ಕವಿ ಗವಾಯಿಗಳ ಸೇವೆ ಮತ್ತು ಆದರ್ಶಗಳನ್ನು ಸ್ಮರಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪೂರ ರೋಡ್‌ನ ವಿಶ್ವೇಶ್ವರಯ್ಯ ಕಾಲನಿಯ ರಾಜಲಕ್ಷ್ಮೀ ನಿಲಯದಲ್ಲಿ ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಹಾಗೂ ಅಶ್ವಿನಿ ಪ್ರಕಾಶನದ ಸಂಯುಕ್ತಾಶ್ರಯದಲ್ಲಿ ಪಂ. ಡಾ. ಪುಟ್ಟರಾಜ ಕವಿ ಗವಾಯಿಗಳ 112ನೇ ಜಯಂತ್ಯುತ್ಸವ ಅಂಗವಾಗಿ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಹಾಗೂ ಗ್ರಂಥ ತುಲಾಭಾರ ಸಮಾರಂಭ ನಡೆಯಿತು.

ದಿವ್ಯಸಾನಿಧ್ಯ ವಹಿಸಿದ್ದ ಗುರುಶಾಂತೇಶ್ವರ ಮಹಾಸ್ವಾಮಿಗಳಿಗೆ ಪ್ರತಿಷ್ಠಾನದ ವತಿಯಿಂದ ಅವರ ತೂಕದಷ್ಟು ಗ್ರಂಥಗಳನ್ನು ಸಮರ್ಪಿಸಿ ತುಲಾಭಾರ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕೃಷ್ಣಗೌಡ ಪಾಟೀಲ, ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸಾಹಿತಿಗಳು ಹೆಚ್ಚಿನ ಸಹಕಾರ ನೀಡಬೇಕು.

ಪುಟ್ಟರಾಜ ಕವಿ ಗವಾಯಿಗಳ ಆದರ್ಶಗಳು ನಾಡಿನ ಮನೆ-ಮನಗಳಲ್ಲಿ ನೆಲೆಸಿದ್ದು, ಅವರ ಸ್ಮರಣೆಗಾಗಿ ಇಂತಹ ಕಾರ್ಯಕ್ರಮಗಳು ನಡೆಯುವುದು ಸಂತಸದ ಸಂಗತಿ ಎಂದು ಹೇಳಿದರು.

ಪ್ರತಿಷ್ಠಾನದ ಸಾಧನೆ ಹಾಗೂ ಕಾರ್ಯಚಟುವಟಿಕೆಗಳ ಬಗ್ಗೆ ಶ್ರೀಮತಿ ಪುಷ್ಪಲತಾ ಹಿರೇಮಠ ವಿವರಿಸಿದರು.

31 ಜನ ಕವಿಗಳು, ಸಾಹಿತಿಗಳು ಹಾಗೂ ವಿವಿಧ ಕ್ಷೇತ್ರದ ಸಾಧಕರಿಗೆ ಸದ್ಭಾವನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಪ್ರತಿಷ್ಠಾನದ ಅಧ್ಯಕ್ಷೆ ಡಾ. ವ್ಹಿ.ವ್ಹಿ. ಹಿರೇಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

## ಸರಕಾರಿ ನೌಕರರ ಮೇಲೆ ಹಲ್ಲೆ ಯತ್ನ ಆರೋಪ: ತಹಶೀಲ್ದಾರ್‌ಗೆ ನೌಕರರ ಸಂಘದಿಂದ ಮನವಿ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕರಾದ ಜಿ. ಉಮೇಶ್ ಅವರು ಕರ್ತವ್ಯ ನಿರತರಾಗಿದ್ದ ವೇಳೆ ಕೆಲ ಸಾರ್ವಜನಿಕರು ದೈಹಿಕ ಹಲ್ಲೆಗೆ ಮುಂದಾದ ಘಟನೆ ಖಂಡನೀಯ ಎಂದು ತಾಲ್ಲೂಕು ಸರಕಾರಿ ನೌಕರರ ಸಂಘ ತಿಳಿಸಿದೆ. ಈ ಸಂಬಂಧ ತಾಲೂಕು ಮಿನಿ ವಿಧಾನಸೌಧದಲ್ಲಿ ತಹಶೀಲ್ದಾರ್ ಆರ್. ಕವಿತಾ ಅವರಿಗೆ ಮನವಿ ಸಲ್ಲಿಸಲಾಯಿತು.

ಇತ್ತೀಚಿನ ದಿನಗಳಲ್ಲಿ ಸರಕಾರಿ ನೌಕರರ ಮೇಲೆ ಇಂತಹ ಘಟನೆಗಳು ಹೆಚ್ಚಾಗುತ್ತಿರುವುದರಿಂದ ಸರ್ಕಾರ ನೌಕರರ ಸುರಕ್ಷತೆಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ ಮಾತನಾಡಿ, "ಸರಕಾರಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಸಾರ್ವಜನಿಕ ವ್ಯಕ್ತಿಯೊಬ್ಬರು ಶಿಕ್ಷಕರ ಕೊಠಡಿಗೆ ನುಗ್ಗಿ ಹಲ್ಲೆ ನಡೆಸಿದ್ದಾರೆ. ಈ ಕುರಿತು ಶಿಕ್ಷಕರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ," ಎಂದು ಹೇಳಿದರು.

ಈ ವೇಳೆ ನೌಕರರ ಸಂಘದ ಮಾಜಿ ಅಧ್ಯಕ್ಷ ಯಂಕಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಟಿ. ಸೋಮಶೇಖರ್, ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಹ್ಯಾಟಿ ಲೋಕಪ್ಪ, ಖಜಾಂಚಿ ಬಿ. ಕೊಟ್ರಪ್ಪ, ಉಪಾಧ್ಯಕ್ಷ ಹನುಮರೆಡ್ಡಿ, ಇಟಿಗಿ ಮಂಜುನಾಥ, ಪ್ರಭಾಕರ, ಆನಂದ್ ಹಂಪಸಾಗರ, ಆಂಜನೇಯ, ವೀರಣ್ಣ, ಹೇಮಂತ್ ಹಾಗೂ ಗುರುಭವನ ಸಮಿತಿ ಪ್ರಹ್ಲಾದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ವಿಂಡ್ ಕಂಪನಿಗಳ ಹಾವಳಿ ಹೆಚ್ಚಳ!

▶▶ಮೊದಲನೇ ಪುಟದಿಂದ

ಮರೆಯಬಾರದು ಎಂದು ಹೇಳಿದರು. ರೈತರ ಹಿತಾಸಕ್ತಿಯನ್ನು ಕಾಪಾಡುವ ಆಡಳಿತ ನೀಡಬೇಕು; ಇಲ್ಲವಾದರೆ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ರೈತ ಮುಖಂಡ ಮೇಘರಾಜ ಭಾವಿ ಮಾತನಾಡಿ, ಕಳಸಾ-ಬಂಡೂರಿ ಹಾಗೂ ಕೃಷ್ಣಾ ನದಿ ಜೋಡಣೆ ಯೋಜನೆಗಳನ್ನು ಜಾರಿಗೆ ತಂದು ನೀರಾವರಿ ಸೌಲಭ್ಯ ಒದಗಿಸಬೇಕು. ಮಳೆಯನ್ನು ಅವಲಂಬಿಸಿರುವ ಗದಗ ಜಿಲ್ಲೆಯಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಿ ಉದ್ಯೋಗ ಸೃಷ್ಟಿಗೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು. ಜೊತೆಗೆ ಕೃಷಿ ಪರಿಷತ್ ಸ್ಥಾಪನೆಗೂ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾದೇಗೌಡ ಭಾವಿ, ಸಂಗಣ್ಣ ದಂಡಿನ, ಬಸವರಾಜ ಹೊಸಮನಿ, ಬಸನಗೌಡ ಪಾಟೀಲ, ಯಲ್ಲಪ್ಪ ಹಡಗಲಿ, ವಿರೇಶ ಕಲಹಾಳ, ಇಮಾಮಸಾಬ ಚೋಪದಾರ, ಶೇಖಸಾಬ ನದಾಪ ಸೇರಿದಂತೆ ರೈತ ಮುಖಂಡರು ಉಪಸ್ಥಿತರಿದ್ದರು.

## ಸಂಕನೂರು ಇನ್ಸ್ಟಿಟ್ಯೂಟ್ ಟೆನ್ನಿಸ್ ಕ್ಲಬ್‌ನಲ್ಲಿ ಸಾಧಕರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಕನೂರು ಇನ್ಸ್ಟಿಟ್ಯೂಟ್ ಟೆನ್ನಿಸ್ ಕ್ಲಬ್ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದ ಡಾ. ಪವನ ಪಾಟೀಲ ಹಾಗೂ ಶ್ರೀನಿವಾಸ್ ಬದಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.



ಸಮಾಜ ಸೇವೆ ಹಾಗೂ ವೃತ್ತಿ ಕ್ಷೇತ್ರದಲ್ಲಿ ಮಾಡಿದ ಸಾಧನೆಗಾಗಿ ಡಾ. ಪವನ ಪಾಟೀಲ ಅವರಿಗೆ ವಿಶ್ವವಾಣಿ ಮೀಡಿಯಾ ಹೌಸ್ ವತಿಯಿಂದ ದಕ್ಷಿಣ ಆಫ್ರಿಕಾದ ಸನ್‌ಸಿಟಿಯಲ್ಲಿ ನಡೆದ ಸಮಾರಂಭದಲ್ಲಿ "ಗ್ಲೋಬಲ್ ಅಚೀವರ್ಸ್ ಅವಾರ್ಡ್" ನೀಡಿ ಗೌರವಿಸಲ್ಪಟ್ಟ ಹಿನ್ನೆಲೆಯಲ್ಲಿ ಕ್ಲಬ್ ವತಿಯಿಂದ ಅಭಿನಂದಿಸಿ ಸನ್ಮಾನಿಸಲಾಯಿತು.


ಇದೇ ವೇಳೆ ಇತ್ತೀಚೆಗೆ ಮುಧೋಳ ಪೊಲೀಸ್ ಟೆನ್ನಿಸ್ ಕ್ಲಬ್ ವತಿಯಿಂದ ಆಯೋಜಿಸಲಾದ ಮುಧೋಳ ಓಪನ್ ಟೆನ್ನಿಸ್ ಟೂರ್ನಮೆಂಟ್‌ನಲ್ಲಿ ಸಾಧನೆ ಮಾಡಿದ ಶ್ರೀನಿವಾಸ್ ಬದಿ ಅವರನ್ನು ಕೂಡ ಸನ್ಮಾನಿಸಲಾಯಿತು. ಅವರು 45 ವರ್ಷ ಮೇಲ್ಪಟ್ಟ ಸಿಂಗಲ್ಸ್ ವಿಭಾಗದಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದು, 45 ವರ್ಷ ಮೇಲ್ಪಟ್ಟ ಡಬಲ್ಸ್ ವಿಭಾಗದಲ್ಲಿ ರನ್ನರ್-ಅಪ್ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಐಎಂಎ ಅಧ್ಯಕ್ಷರಾದ ಡಾ. ಶ್ರೀಧರ್ ಕುರಡಗಿ, ಐಒಸಿ ಫೀಲ್ಡ್ ಆಫೀಸರ್ ಶ್ರೀನಿವಾಸ್ ನಾಗಿರೆಡ್ಡಿ, ಡಾ. ಮಹಾಂತೇಶ್ ಪಾಟೀಲ, ಡಾ. ಜಯರಾಜ್ ಪಾಟೀಲ, ಡಾ. ಆದಿತ್ಯ ಗೋಡಖಿಂಡಿ, ಡಾ. ಪ್ರಕಾಶ್ ಸಂಕನೂರು, ಅಜಿತ್ ಮೋದಕ್ ಸೇರಿದಂತೆ ಹಲವರು ಉಪಸ್ಥಿತರಿದ್ದು, ಸಾಧಕರಿಗೆ ಅಭಿನಂದನೆ ಸಲ್ಲಿಸಿದರು.

## ಠೇವಣಿ ಹಣ ಮರಳಿಸದ ಸೊಸೈಟಿಗೆ ದಂಡ: ಗ್ರಾಹಕರಿಗೆ 50 ಸಾವಿರ ಪರಿಹಾರ ನೀಡಲು ಆಯೋಗ ಆದೇಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಠೇವಣಿ ಹಣವನ್ನು ಬಡ್ಡಿಯೊಂದಿಗೆ ಮರಳಿಸದೇ ಗ್ರಾಹಕರಿಗೆ ತೊಂದರೆ ಉಂಟು ಮಾಡಿದ ಹಿನ್ನೆಲೆಯಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಕೋ-ಆಪರೇಟಿವ್ ಸೊಸೈಟಿಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ದಂಡ ಮತ್ತು ಪರಿಹಾರ ವಿಧಿಸಿದೆ.



ಧಾರವಾಡದ ರಾಜಶೇಖರ ಮತ್ತು ಪುಷ್ಪಾ ದಂಪತಿಗಳು ಎದುರುದಾರರ ಸೊಸೈಟಿಯ ಸದಸ್ಯರಾಗಿದ್ದು, ವಿವಿಧ ಮೊತ್ತಗಳ ಎಫ್.ಡಿ., ಆರ್.ಡಿ. ಹಾಗೂ ಉಳಿತಾಯ ಖಾತೆಗಳಲ್ಲಿ ಠೇವಣಿಗಳನ್ನು ಹೊಂದಿದ್ದರು. ವೈಯಕ್ತಿಕ ಅಗತ್ಯದಿಂದಾಗಿ ತಮ್ಮ ಹಣವನ್ನು ಹಿಂದಿರುಗಿಸಲು ಹಲವು ಬಾರಿ ಕೇಳಿಕೊಂಡರೂ, ಸೊಸೈಟಿ ಹಣ ನೀಡದೇ ಮೋಸ ಮಾಡಿ ಸೇವಾ ನ್ಯೂನ್ಯತೆ ಎಸಗಿದೆ ಎಂದು ಆರೋಪಿಸಿ ದಂಪತಿಗಳು ಸೊಸೈಟಿಯ ಅಧ್ಯಕ್ಷ ವಿರುಪಾಕ್ಷಿ ಎಸ್. ಸಾದುನವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಹಾಗೂ ತಮ್ಮ ಠೇವಣಿ ಹಣವನ್ನು ನೀಡುವಂತೆ 15-10-2025 ರಂದು ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ಈ ಪ್ರಕರಣವನ್ನು ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಅ. ಬೋಳಶೆಟ್ಟಿ ಅವರು, ದೂರುದಾರರು ಸೊಸೈಟಿಯಲ್ಲಿ ಎಫ್.ಡಿ., ಆರ್.ಡಿ. ಮತ್ತು ಉಳಿತಾಯ ಖಾತೆ ಹೊಂದಿರುವುದು ಹಾಗೂ ರಶೀದಿಗಳಲ್ಲಿ ಉಲ್ಲೇಖಿಸಿರುವ ಮೊತ್ತಗಳು ಸತ್ಯವಾಗಿರುವುದು ದಾಖಲೆಗಳಿಂದ ಸ್ಪಷ್ಟವಾಗಿದೆ ಎಂದು ಅಭಿಪ್ರಾಯಪಟ್ಟರು. ದೂರುದಾರರಿಗೆ ಹಣದ ಅಗತ್ಯವಿದ್ದರೂ ಅದನ್ನು ಮರಳಿಸದೆ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಆಯೋಗ ತೀರ್ಪು ನೀಡಿದೆ.

ಅದರಂತೆ ದೂರುದಾರರ ಎಫ್.ಡಿ., ಆರ್.ಡಿ. ಮತ್ತು ಉಳಿತಾಯ ಖಾತೆಗಳಲ್ಲಿ ಇರುವ ಹಣವನ್ನು ಬಡ್ಡಿಯೊಂದಿಗೆ ಲೆಕ್ಕ ಹಾಕಿ ಒಂದು ತಿಂಗಳೊಳಗೆ ಹಿಂದಿರುಗಿಸಲು ಆಯೋಗ ಆದೇಶಿಸಿದೆ. ಜೊತೆ-ಗೆ ದೂರುದಾರರಿಗೆ ಆಗಿರುವ ಅನಾನುಕೂಲ, ತೊಂದರೆ ಹಾಗೂ ಮಾನಸಿಕ ಹಿಂಸೆಗೆ ರೂ.50,000 ಪರಿಹಾರ ಹಾಗೂ ರೂ.10,000 ಪ್ರಕರಣ ವೆಚ್ಚ ನೀಡುವಂತೆ ಸೊಸೈಟಿಯ ಅಧ್ಯಕ್ಷ ವಿರುಪಾಕ್ಷಿ ಎಸ್. ಸಾದುನವರ ಅವರಿಗೆ ಆಯೋಗ ನಿರ್ದೇಶಿಸಿದೆ.

### ಜೀತ ಪದ್ಧತಿ ದಾಸ್ಯದ ಸಂಕೇತ; ಕಾನೂನು ಜಾರಿಯಲ್ಲಿ ಅಧಿಕಾರಿಗಳ ಜವಾಬ್ದಾರಿ ಹೆಚ್ಚಿದೆ-ಡಿಸಿ ಸ್ನೇಹಲ್ ಆರ್

# ಜೀತ ಪದ್ಧತಿ ನಿರ್ಮೂಲನೆಗೆ ಸಮಗ್ರ ಹೋರಾಟ ಅಗತ್ಯ




■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜೀತ ಪದ್ಧತಿ ಅನಿಷ್ಠ ಹಾಗೂ ಮಾನವ ವಿರೋಧಿ ಸಂಪ್ರದಾಯವಾಗಿದ್ದು, ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಮಾಜದ ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕಾರ್ಮಿಕ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಹಾಗೂ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

> "ಜೀತ ಪದ್ಧತಿ ಸಮಾನತೆ ಮತ್ತು ಮಾನವೀಯ ಮೌಲ್ಯಗಳಿಗೆ ವಿರುದ್ಧವಾದ ದಾಸ್ಯದ ಸಂಕೇತವಾಗಿದೆ. ಜೀತ ಮುಕ್ತ ಜಿಲ್ಲೆ ನಿರ್ಮಾಣಕ್ಕೆ ಎಲ್ಲ ಇಲಾಖೆಗಳ ಸಮನ್ವಯ ಹಾಗೂ ಸಮಾಜದ ಸಹಕಾರ ಅಗತ್ಯ."
>
> – ಜಿಲ್ಲಾಧಿಕಾರಿ ಸ್ನೇಹಲ್ ಆರ್.

"ಜೀತ ಪದ್ಧತಿ ಸಮಾನತೆ ಮತ್ತು ಮಾನವೀಯ ಮೌಲ್ಯಗಳಿಗೆ ವಿರುದ್ಧವಾಗಿದೆ. ಜೀತ ಮುಕ್ತ ಜಿಲ್ಲೆ ನಿರ್ಮಾಣಕ್ಕೆ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ಅತ್ಯಗತ್ಯವಾಗಿದೆ." ಎಂದು ಅವರು ಹೇಳಿದರು.

ಜೀತ ಪದ್ಧತಿ ದಾಸ್ಯದ ಸಂಕೇತವಾಗಿದ್ದು, ಸರ್ಕಾರ ಜಾರಿಗೆ ತಂದಿರುವ ಜೀತ ಪದ್ಧತಿ ನಿಷೇಧ ಕಾಯ್ದೆ1976 ಹಾಗೂ ಬಾಲ ಮತ್ತು ಕಿಶೋರ ಕಾರ್ಮಿಕರ ಕಾಯ್ದೆ1986 (ತಿದ್ದುಪಡಿ 2016) ಅನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಸಮಾಜದಲ್ಲಿ ಕಾನೂನುಬಾಹಿರ ಚಟುವಟಿಕೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು. ವಿಶೇಷವಾಗಿ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಮಕ್ಕಳನ್ನು ಕೆಲಸಕ್ಕೆ ಕಳುಹಿಸುವುದನ್ನು ತಡೆಯಬೇಕು ಎಂದು ಅವರು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ ಮಾತನಾಡಿ, ಜನರನ್ನು ಜೀತಕ್ಕೆ ಇಟ್ಟು ಮೂಲಭೂತ ಸೌಲಭ್ಯಗಳಿಂದ ವಂಚಿಸುವ ಘಟನೆಗಳು ಸಮಾಜದಲ್ಲಿ ಕಂಡುಬರುತ್ತಿದ್ದು, ಇಂತಹ ಅಮಾನವೀಯ ಪದ್ಧತಿಗಳನ್ನು ತಡೆಯಲು ಜಾಗೃತಿ ಕಾರ್ಯಕ್ರಮಗಳು ಹಾಗೂ ಕಾನೂನು ಕ್ರಮಗಳನ್ನು ಬಲಪಡಿಸಲಾಗುತ್ತಿದೆ ಎಂದು ಹೇಳಿದರು.

## ನಿಧನ

### ಪಿ ಜಿ ಮೋಹನ್



**ಹಗರಿಬೊಮ್ಮನಹಳ್ಳಿ:** ಇಲ್ಲಿನ ರಾಮನಗರ 1ನೇ ವಾರ್ಡ್‌ನ ದತ್ತನಗರ ನಿವಾಸಿ ಪಿ.ಜಿ. ಮೋಹನ್ (72) ಅವರು ನಿಧನರಾದರು.

ಮೃತರು ಪತ್ನಿ, ಮೂರು ಹೆಣ್ಣು ಮಕ್ಕಳು, ಇಬ್ಬರು ಗಂಡು ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಇವರ ಅಂತ್ಯಕ್ರಿಯೆ ಮಾ.6ರ ಶುಕ್ರವಾರ ಬೆಳಗ್ಗೆ 10 ಗಂಟೆಗೆ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

# ನಗರಸಭೆ ಚುನಾವಣೆ ವಿಚಾರ: ಸಚಿವರು ಕ್ಷಮೆ ಕೇಳಬೇಕು - ಲಿಂಗರಾಜ ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ



ಹೈಕೋರ್ಟ್ ತಡೆ-ಯಾಜ್ಞೆ ನೀಡಿದ್ದರೂ ಗದಗ-ಬೆಟಗೇರಿ ನಗರಸಭೆ ಚುನಾವಣೆ ನಡೆಸಿದ ವಿಚಾರದಲ್ಲಿ ಜಿಲ್ಲಾಡಳಿತ ತಪ್ಪೊಪ್ಪಿಕೊಂಡಿರುವುದು ಗಂಭೀರ ವಿಷಯವಾಗಿದೆ. ಅಧಿಕಾರಕ್ಕಾಗಿ ಜನಾದೇಶವನ್ನೇ ಬಲಿಕೊಟ್ಟಿರುವ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಅವಳಿ ನಗರದ ಜನತೆಯ ಕ್ಷಮೆ ಕೇಳಬೇಕು ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಆಗ್ರಹಿಸಿದರು.

ಹೈಕೋರ್ಟ್ ಆದೇಶ ನೀಡಿದ ಬಳಿಕವೂ ಚುನಾವಣೆ ಪ್ರಕ್ರಿಯೆ ನಿಲ್ಲಿಸಲಿಲ್ಲ ಎಂಬುದು ವಿಷಾದನೀಯ. ವಿಚಾರಣೆ ವೇಳೆ ನ್ಯಾಯಾಧೀಶರು ಅಡ್ವಕೇಟ್ ಜನರಲ್ ಮೂಲಕ ಜಿಲ್ಲಾಧಿಕಾರಿಗೆ ಮಾಹಿತಿ ನೀಡಿ ಚುನಾವಣೆಯನ್ನು ತಕ್ಷಣ ತಡೆಹಿಡಿಯಲು ಸೂಚಿಸಿದ್ದರು. ಆದರೂ ಜಿಲ್ಲಾಡಳಿತ ಸಮಯಕ್ಕೆ ಕ್ರಮ ಕೈಗೊಂಡಿಲ್ಲ ಎಂದು ಅವರು ಆರೋಪಿಸಿದರು.

ನಗರಸಭೆ ಆವರಣದಲ್ಲಿ ಗೇಟ್‌ಗಳನ್ನು ಬಂದ್ ಮಾಡಿ ಸಂಪರ್ಕ ಸಾಧನಗಳನ್ನು ನಿಷ್ಕ್ರಿಯಗೊಳಿಸಿ ಹೈಕೋರ್ಟ್ ಆದೇಶ ತಂದ ಅಧಿಕಾರಿಗಳನ್ನೇ ಒಳಗೆ ಬಿಡದೆ ಚುನಾವಣೆ ನಡೆಸಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಬೆಳವಣಿಗೆ ಎಂದು ಅವರು ಹೇಳಿದರು.

ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ನಡೆದ ಘಟನೆ ಕುರಿತು ಜಿಲ್ಲಾಡಳಿತವೇ ತನ್ನ ತಪ್ಪನ್ನು ಒಪ್ಪಿಕೊಂಡಿರುವುದು ಗಂಭೀರ ಸಂಗತಿ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನು ಬೇರೆ ಜಿಲ್ಲೆಗೆ ವರ್ಗಾವಣೆ ಮಾಡಬೇಕು. ಇಲ್ಲವಾದರೆ ಸಚಿವರು ನೈತಿಕ ಹೊಣೆ ಹೊತ್ತು ಕಾನೂನು ಸಚಿವ ಸ್ಥಾನದಿಂದ ಹಿಂದೆ ಸರಿಯಬೇಕು ಎಂದು ಒತ್ತಾಯಿಸಿದರು.

ಜನರು ನೀಡಿದ ಮತದ ಆದೇಶವನ್ನು ಗೌರವಿಸುವುದು ರಾಜಕೀಯ ನಾಯಕರ ಮೊದಲ ಜವಾಬ್ದಾರಿ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಲಿಂಗರಾಜ ಪಾಟೀಲ ಆಗ್ರಹಿಸಿದರು.

## ಅಂಬೇಡ್ಕರ್ ಸಾಧನೆಗಳು ಪ್ರತಿದಿನವೂ ನಮಗೆ ಮಾರ್ಗದರ್ಶನ : ಜಿಲ್ಲಾಧಿಕಾರಿ ಸ್ನೇಹಲ್ ಆರ್.

# ಧಾರವಾಡದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸ್ಮರಣಾರ್ಥ 'ಭೀಮ ಗಾಯನ' ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆಗಳು ಪ್ರತಿದಿನವೂ ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಿವೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು.

ಧಾರವಾಡದ ಡಾ. ಬಿ.ಆರ್. ಅಂಬೇಡ್ಕರ್ ಪಾರಂಪರಿಕ ಕಟ್ಟಡದ ಜ್ಞಾನ ಬುದ್ಧ ವಿಹಾರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಭೀಮ ಗಾಯನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ, ಕಾನೂನುಗಳು, ಮಹಿಳಾ ಮತ್ತು ಕಾರ್ಮಿಕ ಚಿಂತನೆಗಳು ನಮ್ಮ ಜೀವನವನ್ನು ಸರಳ ಮತ್ತು ಅರ್ಥಪೂರ್ಣವಾಗಿಸಿವೆ. ಈ ಶಾಲೆಯಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು



ಇತಿಹಾಸದ ಭಾಗವಾಗಿದ್ದು, ಅವರು ಉತ್ತಮ ನಾಗರೀಕರಾಗಿ ದೇಶಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಎಜುಕೇಷನಲ್ ಮತ್ತು ಚಾರಿಟೇಬಲ್ ಟ್ರಸ್ಟ್‌ನ ಟ್ರಸ್ಟಿ ಸಂತೋಷ ಜಕ್ಕಪ್ಪನವರ ಮಾತನಾಡಿ, ಅಂಬೇಡ್ಕರ್ ಅವರ ಹೋರಾಟದ ಫಲವಾಗಿ ಶಾಲೆ ಆರಂಭವಾಗಿದ್ದು, ಮಾತೋಶ್ರೀ ರಮಾಬಾಯಿ ಅವರು ತಮ್ಮ ಆಭರಣಗಳನ್ನು ಮಾರಾಟ ಮಾಡಿ ವಿದ್ಯಾರ್ಥಿಗಳಿಗೆ ಊಟ ವ್ಯವಸ್ಥೆ ಮಾಡಿದ್ದನ್ನು ಸ್ಮರಿಸಿದರು.

ಬುದ್ಧ ರಕ್ಕಿಥ ವಸತಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ ಕೆ. ಹಲಗಿ ಮಾತನಾಡಿ, ಅಂಬೇಡ್ಕರ್ ಅವರ ಪ್ರಯತ್ನದಿಂದ ಆರಂಭವಾದ ಈ ಶಾಲೆ ಇಂದು ಉತ್ತಮ ಬೆಳವಣಿಗೆ ಕಂಡಿದೆ ಎಂದು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ (ಪ್ರ) ಡಾ. ಸುರೇಶ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, 2025-26ನೇ ಸಾಲಿನ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಡಿ ರಾಜ್ಯದ ಸುಮಾರು 10 ಜಿಲ್ಲೆಗಳಲ್ಲಿ ಭೀಮ ಗಾಯನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗಣ್ಯರು ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಸಂವಿಧಾನ ಪೀಠಿಕೆಯನ್ನು ಓದಿದರು. ಸಿದ್ಧಾರ್ಥ ಯುವ ಕ್ರೀಡಾ ಸಾಂಸ್ಕೃತಿಕ ಅಭಿವೃದ್ಧಿ ಸಂಘದ ಕಲಾವಿದರು ಅಂಬೇಡ್ಕರ್ ಅವರ ವಿಚಾರಧಾರೆಗಳ ಕುರಿತು ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಸೇರಿದಂತೆ ಅನೇಕ ಗಣ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

### ಭೀಮ ಗಾಯನ ಕಾರ್ಯಕ್ರಮದ ವಿಶೇಷತೆ

ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 'ಭೀಮ ಗಾಯನ' ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಈ ಕಾರ್ಯಕ್ರಮಗಳಲ್ಲಿ ಅಂಬೇಡ್ಕರ್ ಅವರ ಜೀವನ, ಹೋರಾಟ ಹಾಗೂ ಸಂವಿಧಾನಿಕ ಮೌಲ್ಯಗಳನ್ನು ಹಾಡುಗಳ ಮೂಲಕ ಜನರಿಗೆ ಪರಿಚಯಿಸಲಾಗುತ್ತದೆ. ಧಾರವಾಡದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಲಾವಿದರು ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಗಾಯನದ ಮೂಲಕ ಪ್ರಸ್ತುತಪಡಿಸಿದರೆ, ವಿದ್ಯಾರ್ಥಿಗಳು ಬುದ್ಧ ವಂದನೆ ಸಲ್ಲಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

## ಬೀದಿ ಬದಿ ವ್ಯಾಪಾರಿಗಳಿಗೆ ಸರ್ಕಾರಿ ಯೋಜನೆಗಳ ಸದುಪಯೋಗಕ್ಕೆ ಶೋಭಾ ಬೆಳ್ಳಿಕೊಪ್ಪ ಕರೆ

# ಅಸಂಘಟಿತ ಕಾರ್ಮಿಕರು ಯೋಜನೆಗಳ ಲಾಭ ಪಡೆದುಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರಗಳು ಬೀದಿ ಬದಿ ವ್ಯಾಪಾರಸ್ಥರ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ವ್ಯಾಪಾರಸ್ಥರು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಡಿ-ನಲ್ಮ್ ಯೋಜನೆಯ ಸಮುದಾಯ ಸಂಘಟನಾ ಅಧಿಕಾರಿ ಹಾಗೂ ಟಿ.ವಿ. ಕಾರ್ಯದರ್ಶಿ ಶೋಭಾ ಬೆಳ್ಳಿಕೊಪ್ಪ ಹೇಳಿದರು.


ಪಟ್ಟಣದ ಪುರಸಭೆ ಆವರಣದಲ್ಲಿ ಬೀದಿ ಬದಿ ವ್ಯಾಪಾರಸ್ಥರಿಗಾಗಿ ಆಯೋಜಿಸಿದ್ದ ಉಚಿತ ಆರೋಗ್ಯ ಶಿಬಿರ ಹಾಗೂ ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ (PM-SYM) ಯೋಜನೆಯ ಅಸಂಘಟಿತ ಕಾರ್ಮಿಕರ ವಿಶೇಷ ನೋಂದಣಿ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಸರ್ಕಾರಗಳು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿವೆ. ಬೀದಿ ಬದಿ ವ್ಯಾಪಾರಸ್ಥರು ಈ ಯೋಜನೆಗಳ ಬಗ್ಗೆ ಮಾಹಿತಿ ಪಡೆದು ಅವುಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು" ಎಂದು ಶೋಭಾ ಬೆಳ್ಳಿಕೊಪ್ಪ ಹೇಳಿದರು.

ಕಾರ್ಮಿಕ ಇಲಾಖೆಯ ಸಿಬ್ಬಂದಿ ಎಂ.ಎ. ಸಿದ್ದಿ ಮಾತನಾಡಿ, 18 ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಶ್ರಮಯೋಗಿ ಮಾನ್ ಧನ್ ಯೋಜನೆಗೆ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು. ಜನವರಿ 15ರಿಂದ ಮಾರ್ಚ್ 15ರವರೆಗೆ ನಡೆಯುತ್ತಿರುವ ಈ ವಿಶೇಷ ಅಭಿಯಾನದ ಪ್ರಯೋಜನವನ್ನು ಪಡೆಯುವಂತೆ ಕಾರ್ಮಿಕರಿಗೆ ಮನವಿ ಮಾಡಿದರು.

ವೈದ್ಯ ಡಾ. ಮಂಜುನಾಥ ಮರಿಗೌಡ್ರ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರು ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಆರೋಗ್ಯದ ಬಗ್ಗೆ ಹೆಚ್ಚು ಜಾಗೃತಿ ವಹಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ಕಾರ್ಮಿಕರು ಹಾಗೂ ಸಾರ್ವಜನಿಕರು ಆರೋಗ್ಯ ತಪಾಸಣೆ ಮಾಡಿಸಿಕೊಂಡರು. ಇದೇ ವೇಳೆ ಹಲವರು ಶ್ರಮಯೋಗಿ ಮಾನ್ ಧನ್ ಯೋಜನೆಗೆ ನೋಂದಣಿ ಮಾಡಿಸಿದರು.



# ವಿದ್ಯಾರ್ಥಿಗಳು ಜ್ಞಾನ ಹೆಚ್ಚಿಸಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು: ದಿಂಗಾಲೇಶ್ವರ ಶ್ರೀ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಂದಿನ ಅಂತರ್ಜಾಲ ಯುಗದಲ್ಲಿ ವಿದ್ಯಾರ್ಥಿಗಳು ಪ್ರಾಥಮಿಕ ಹಂತದಿಂದಲೇ ಜ್ಞಾನವನ್ನು ವೃದ್ಧಿಸಿಕೊಂಡು ಆರ್ಥಿಕ ಹಾಗೂ ಸಾಮಾಜಿಕವಾಗಿ ಸದೃಢರಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಶಿರಹಟ್ಟಿಯ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ಜ. ಫಕೀರೇಶ್ವರ ಪ್ರೌಢಶಾಲೆಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರ ಪ್ರದೇಶಾಭಿವೃದ್ಧಿ ಯೋಜನೆಯಡಿ 5 ಲಕ್ಷ ವೆಚ್ಚದಲ್ಲಿ ನಿರ್ಮಿಸಿದ ಕಂಪ್ಯೂಟರ್ ಹಾಗೂ ಕಂಪ್ಯೂಟರ್ ಕೇಂದ್ರವನ್ನು ಉದ್ಘಾಟಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಪಠ್ಯದ ಜೊತೆಗೆ ಕಂಪ್ಯೂಟರ್ ಶಿಕ್ಷಣವೂ ಇಂದಿನ ಕಾಲದಲ್ಲಿ ಅತಿ ಅವಶ್ಯವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗಬಾರದೆಂಬ ಉದ್ದೇಶದಿಂದ ಈ ಶಾಲೆಯಲ್ಲಿ ಕಂಪ್ಯೂಟರ್ ಶಿಕ್ಷಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಕಾರ್ಯಕ್ಕೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ನೀಡಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಹಕಾರ ನೀಡಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಎಸ್.ವಿ. ಸಂಕನೂರ, ಹಿಂದೆ ಓದು ಬರಹ ತಿಳಿಯದವನು ಅನಕ್ಷರಸ್ಥನೆಂದು ಪರಿಗಣಿಸಲಾಗುತ್ತಿತ್ತು. ಆದರೆ ಈಗಿನ ದಿನಗಳಲ್ಲಿ ಕಂಪ್ಯೂಟರ್ ಜ್ಞಾನವಿಲ್ಲದವರನ್ನೂ ಅನಕ್ಷರಸ್ಥರೆಂದು ಹೇಳುವ ಪರಿಸ್ಥಿತಿ ಬಂದಿದೆ. ಜಗತ್ತಿನ ಗಾತ್ರವೇ ಅಂಗೈ ಅಗಲಕ್ಕೆ ಬಂದಿದ್ದು, ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಯುಗದಲ್ಲಿ ಮುನ್ನಡೆಯಲು ಕಂಪ್ಯೂಟರ್ ಮತ್ತು ಅಂತರ್ಜಾಲ ಜ್ಞಾನ ಅತ್ಯವಶ್ಯಕ ಎಂದು ಹೇಳಿದರು. ಜ್ಞಾನವನ್ನು ವಿವೇಕಯುತವಾಗಿ ಬಳಸಿದರೆ ಅದು ನಮ್ಮನ್ನು ಉನ್ನತಿಗೆ ಕೊಂಡೊಯ್ಯುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಬಿ.ಎಂ. ಯರಕದ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಎಚ್.ಟಿ. ಬಿಜ್ಜೂರ, ಸುನೀಲ ಮಹಾಂತಶೆಟ್ಟರ, ಫಕ್ಕೀರೇಶ ರಟ್ಟಿಹಳ್ಳಿ, ಮಹೇಶ ಬಡ್ನಿ, ಜಗದೀಶ ಅಕ್ಕೂರ, ಗಂಗಾಧರ ಬ್ಯಾಲಹುಣಸಿ, ವಿ.ಎಸ್. ಪವಾರ, ಎಸ್.ಬಿ. ಮಳಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### 5 ಲಕ್ಷ ವೆಚ್ಚದಲ್ಲಿ ಕಂಪ್ಯೂಟರ್ ಕೇಂದ್ರ

ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ಜ. ಫಕೀರೇಶ್ವರ ಪ್ರೌಢಶಾಲೆಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರ ಪ್ರದೇಶಾಭಿವೃದ್ಧಿ ಯೋಜನೆಯಡಿ 5 ಲಕ್ಷ ವೆಚ್ಚದಲ್ಲಿ ಹೊಸ ಕಂಪ್ಯೂಟರ್ ಹಾಗೂ ಕಂಪ್ಯೂಟರ್ ಕೇಂದ್ರ ಸ್ಥಾಪಿಸಲಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಡಿಜಿಟಲ್ ಶಿಕ್ಷಣದ ಅವಕಾಶ ಕಲ್ಪಿಸುವ ಉದ್ದೇಶದಿಂದ ಈ ಕೇಂದ್ರ ಆರಂಭಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಹಾಗೂ ಅಂತರ್ಜಾಲ ಜ್ಞಾನ ಪಡೆಯಲು ನೆರವಾಗಲಿದೆ.

# ಶ್ರೀಮತಿ ಕಾಶೀಬಾಯಿ ಪಾಟೀಲ ನಿಧನ; ನೇತ್ರದಾನ ಮೂಲಕ ಮಾದರಿ ನಡೆ



■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ರೋಣ ತಾಲೂಕಿನ ಮಾಳವಾಡ ಗ್ರಾಮದ ನಿವಾಸಿ ಕಾಶೀಬಾಯಿ ಎಸ್. ಪಾಟೀಲ (90) ಬುಧವಾರ ಸಂಜೆ ನಿಧನರಾದರು. ಮೃತರಿಗೆ ಮೂವರು ಪುತ್ರರು ಹಾಗೂ ಮೂವರು ಪುತ್ರಿಯರಿದ್ದಾರೆ. ಗುರುವಾರ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪ್ರೇರಣೆಯಿಂದ ಕುಟುಂಬಸ್ಥರು ನೇತ್ರದಾನ ಮಾಡಲು ಒಪ್ಪಿಗೆ ನೀಡಿದ್ದು, ಗದಗ ಜಿಮ್ಸ್‌ನ ನೇತ್ರ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆ ನಡೆಸಿತು. ಈ ಮೂಲಕ ಮೃತರು ಸಾವಿನಲ್ಲೂ ಬದುಕು ಉಳಿಸುವ ಮಾದರಿ ಕಾರ್ಯಕ್ಕೆ ಕಾರಣರಾದರು.

# ಸೈನಿಕರ ಸೌಹಾರ್ದ ಕ್ರೆಡಿಟ್ ಸಂಘಕ್ಕೆ ದತ್ತಾತ್ರೇಯ ಜೋಶಿ ಅಧ್ಯಕ್ಷ


■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಹಾಲಿ ಮತ್ತು ಮಾಜಿ ಸೈನಿಕರ ಸೌಹಾರ್ದ ಕ್ರೆಡಿಟ್ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಲಕ್ಕುಂಡಿ ಗ್ರಾಮದ ಮಾಜಿ ಸೈನಿಕ ದತ್ತಾತ್ರೇಯ ಜೋಶಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷರಾಗಿ ಗುರುಪಾದಯ್ಯ ಕೆಂಬಾವಿಮಠ ಆಯ್ಕೆಯಾಗಿದ್ದಾರೆ.

ನಿರ್ದೇಶಕರಾಗಿ ಎಸ್.ಎನ್. ಹೊನ್ನಪ್ಪನವರ, ಗೂಳಯ್ಯ ಮಾಲಗಿತ್ತಿಮಠ, ಶೇಖರಗೌಡ ಪಾಟೀಲ, ಶಿವಾನಂದ ಪಲ್ಲೇದ, ಬಸವಣ್ಣೆಪ್ಪ ಅಬ್ಬಿಗೇರಿ, ಶಶಿಧರ ಬಳಗಾನೂರಮಠ, ಚನಬಸಪ್ಪ ಗಾಣಿಗೇರ, ಶಿವಾನಂದ ಮೇಟಿ, ಸುನಿತಾ ಚಳಗೇರಿ ಹಾಗೂ ನೀಲವ್ವ ಸರ್ವಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಚುನಾವಣಾ ಅಧಿಕಾರಿಯಾಗಿ ಆಗಮಿಸಿದ್ದ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿ ಅಧಿಕಾರಿ ಪ್ರಕಾಶ ಹೊಸೂರ ಈ ಕುರಿತು ಮಾಹಿತಿ ನೀಡಿದ್ದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಚ್.ಬಿ. ಬಣಕಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂಘವು ಹಾಲಿ ಹಾಗೂ ಮಾಜಿ ಸೈನಿಕರು ಮತ್ತು ಅವರ ಕುಟುಂಬಗಳ ಆರ್ಥಿಕ ನೆರವಿಗಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾಲ ಸೌಲಭ್ಯ ಸೇರಿದಂತೆ ವಿವಿಧ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮೂಲಕ ಸದಸ್ಯರ ಅಭಿವೃದ್ಧಿಗೆ ಸಹಕಾರ ನೀಡುತ್ತಿದೆ.






ಗದಗದ ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ (ರಿ)ಯ ಶ್ರೀ ರಾಜೇಶ್ವರಿ ಕಲಾಕುಟೀರದ 25ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಿಪಿಜಿ ಅಂಧರ ವಸತಿ ಶಾಲೆಯ ಮುಖ್ಯೋಪಾಧ್ಯಾಯ ಕಳಕಪ್ಪ ಮುದ್ಲಾಪೂರ, ಪತ್ರಕರ್ತ ಗಣೇಶ್ ಪೈ ಹಾಗೂ ಕಲಾವಿದ ಬಸವರಾಜ ನೆಲಜೇರಿ ಅವರನ್ನು ಕಲಾಕುಟೀರದ ಸಂಸ್ಥಾಪಕರು ಹಾಗೂ ಅತಿಥಿಗಳು ಸನ್ಮಾನಿಸಿದರು.

# ವಿವಿಧ ಸಂಘಟನೆಗಳಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದಂಬಾ ಕಲ್ಯಾಣ ಮಂಟಪದಲ್ಲಿ ಗುರುವಾರ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಆಯೋಜಿಸಲಾದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ 158 ಜನರಿಗೆ ನೇತ್ರ ತಪಾಸಣೆ, ರಕ್ತದೊತ್ತಡ (ಬಿ.ಪಿ) ಹಾಗೂ ಶುಗರ್ ತಪಾಸಣೆ ನಡೆಸಲಾಯಿತು. ಇವರಲ್ಲಿ 33 ಜನರನ್ನು ಉಚಿತ ನೇತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಲಯನ್ಸ್ ಲೇಡೀಜ್ ಕ್ಲಬ್, ಗದಗ ಐಎಂಎ ಹಾಗೂ ಗದಗ ಜಿಮ್ಸ್ ಸಂಯುಕ್ತ ಆಶ್ರಯದಲ್ಲಿ ಈ ಶಿಬಿರವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ, ಗದಗ ಐಎಂಎ ಅಧ್ಯಕ್ಷ ಡಾ. ಶ್ರೀಧರ ಕುರಡಗಿ, ಪ್ರವೀಣ ವಾರಕರ, ದತ್ತಣ್ಣ ಬೇವಿನಕಟ್ಟಿ, ಲಯನ್ಸ್ ಲೇಡೀಜ್ ಕ್ಲಬ್ ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಅಮೃತ ವಾರಕರ, ಎಸ್.ಎಸ್.ಕೆ ಸಮಾಜದ ಕಾರ್ಯದರ್ಶಿ ವಿನೋದ ಶಿದ್ಲಿಂಗ್, ನಗರಸಭಾ ಸದಸ್ಯ ನಾಗರಾಜ ತಳವಾರ, ಸಂತೋಷ ಕಬಾಡರ, ಎಸ್.ಡಿ. ಪಾಟೀಲ, ಶ್ರೀನಿವಾಸ ಬಾಕಳೆ, ಜೆ.ಡಿ. ಉತ್ತರಕರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾರ್ವಜನಿಕರು ಶಿಬಿರದ ಪ್ರಯೋಜನ ಪಡೆದುಕೊಂಡರು. ಶಿಬಿರದಲ್ಲಿ ರಕ್ತದಾನ, ನೇತ್ರದಾನ ಹಾಗೂ ದೇಹದಾನದ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka